ಸಂಪುಟ : 10 ಸಂಚಿಕೆ: 260 ಪುಟ : 4+2 ಬೆಲೆ: 3.00 ಶುಕ್ರವಾರ ನವೆಂಬರ್ 28 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 260 Pages : 4+2 Price : 3.00 Friday November 28 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ‘ಶಾಲೆಯ ಅಂಗಳದಲ್ಲಿ ತಾರಾಲಯ’ ಯೋಜನೆಗೆ ಸಿಎಂ ಸಿದ್ದರಾಮಯ್ಯ ಚಾಲನೆ

# ವಿಜ್ಞಾನ ಕಲಿಕೆಯಲ್ಲಿ ಕ್ರಾಂತಿಕಾರಿ ಬದಲಾವಣೆಯ ಗುರಿ



**ಏನಿದು ಯೋಜನೆ?**

ನಗರಗಳಿಗೆ ಸೀಮಿತವಾಗಿದ್ದ ಪ್ಲಾನೆಟೇರಿಯಂ ಅನುಭವದಿಂದ ಗ್ರಾಮೀಣ ವಿದ್ಯಾರ್ಥಿಗಳು ವಂಚಿತರಾಗಬಾರದು ಎಂಬ ಉದ್ದೇಶದಿಂದ ಈ ಯೋಜನೆ ರೂಪಿತವಾಗಿದೆ. ಸುಸಜ್ಜಿತ ವಾಹನಗಳಲ್ಲಿ 5 ಮೀಟರ್ ಗಾತ್ರದ ಗುಂಬಜ್ (Dome), 360–ಡಿಗ್ರಿ ಫಿಶ್ ಐ ಲೆನ್ಸ್ ಪ್ರೊಜೆಕ್ಟರ್, ಹವಾ ನಿಯಂತ್ರಣ ವ್ಯವಸ್ಥೆ ಮತ್ತು ಅತ್ಯಾಧುನಿಕ ಧ್ವನಿವರ್ಧಕಗಳನ್ನು ಅಳವಡಿಸಲಾಗಿರುತ್ತದೆ. ಮಕ್ಕಳು ಶಾಲೆಯ ಅಂಗಳದಲ್ಲೇ ಕುಳಿತು ಬ್ರಹ್ಮಾಂಡದ ಅದ್ಭುತಗಳನ್ನು ವೀಕ್ಷಿಸುವ ಅಪರೂಪದ ಅವಕಾಶವನ್ನು ಈ ಯೋಜನೆ ಕಲ್ಪಿಸಲಿದೆ.



**■ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಖಗೋಳ ವಿಜ್ಞಾನದ ಕೌತುಕವನ್ನು ಬಿತ್ತಿ, ವಿಜ್ಞಾನ ಕಲಿಕೆಯಲ್ಲಿ ಕ್ರಾಂತಿಕಾರಿ ಬದಲಾವಣೆ ತರುವುದು ನಮ್ಮ ಸರ್ಕಾರದ ಪ್ರಮುಖ ಗುರಿಯಾಗಿದೆ. ಈ ಯೋಜನೆ ಈಗಾಗಲೇ 17 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳನ್ನು ತಲುಪಿದ್ದು, ಈ ಸಾಧನೆ ಹೆಮ್ಮೆಯ ವಿಷಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ವಿಶ್ವಮಟ್ಟದ ವಿಜ್ಞಾನ ಶಿಕ್ಷಣವನ್ನು ತಲುಪಿಸುವ ಮಹತ್ವಾಕಾಂಕ್ಷಿ ‘ಶಾಲೆಯ ಅಂಗಳದಲ್ಲಿ ತಾರಾಲಯ’ ಡಿಜಿಟಲ್ ಮೊಬೈಲ್ ಪ್ಲಾನೆಟೇರಿಯಂ ಯೋಜನೆಗೆ ಗುರುವಾರ ವಿಧಾನಸೌಧದ ಆವರಣದಲ್ಲಿ ಹಸಿರು ನಿಶಾನೆ ತೋರಿಸುವ ಮೂಲಕ ವಿದ್ಯುಕ್ತವಾಗಿ ಚಾಲನೆ ನೀಡಿ ಅವರು ಮಾತನಾಡಿದರು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ಅವರು ಮಾತನಾಡಿ, ನಮ್ಮ ಸರ್ಕಾರವು ವಿಜ್ಞಾನ ಶಿಕ್ಷಣಕ್ಕೆ ದೃಢವಾಗಿ ಬದ್ಧವಾಗಿದೆ. ಈ ಯೋಜನೆಗೆ ಹೊಸ ಚೈತನ್ಯ ಮತ್ತು ಸುಧಾರಿತ ತಂತ್ರಜ್ಞಾನದ ಸ್ಪರ್ಶ ನೀಡಲಾಗಿದೆ. ಪ್ರಸ್ತುತ ಕೆಲವೇ ಜಿಲ್ಲೆಗಳಿಗೆ ಸೀಮಿತವಾಗಿರುವ ಈ ಮಹತ್ವದ ಸೇವೆಯನ್ನು ಮುಂದಿನ ದಿನಗಳಲ್ಲಿ ರಾಜ್ಯದ ಪ್ರತಿಯೊಂದು ಜಿಲ್ಲೆಯ ಮಕ್ಕಳು ತಲುಪುವಂತೆ ವಿಸ್ತರಿಸಲು ಶೀಘ್ರದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಘೋಷಿಸಿದರು.

ಕಾರ್ಯಕ್ರಮದಲ್ಲಿ ಐಟಿ–ಬಿಟಿ ಸಚಿವರಾದ ಪ್ರಿಯಾಂಕ ಖರ್ಗೆ, ಇಲಾಖೆ ಕಾರ್ಯದರ್ಶಿಗಳಾದ ಎನ್ ಮಂಜುಳಾ, ಘಣಜಿಥಿ ವ್ಯವಸ್ಥಾಪಕ ನಿರ್ದೇಶಕರಾದ ಸದಾಶಿವ ಪ್ರಭು ಉಪಸ್ಥಿತರಿದ್ದರು.

---

### 4ನೇ ದಿನಕ್ಕೆ ಕಾಲಿಟ್ಟ ಅತಿಥಿ ಉಪನ್ಯಾಸಕರ ಹೋರಾಟ । ತೀವ್ರ ಅಸ್ವಸ್ಥಗೊಂಡ ಅತಿಥಿ ಉಪನ್ಯಾಸಕಿ

# ಮುಂದಿನ ಅನಾಹುತಗಳಿಗೆ ಸರ್ಕಾರವೇ ಕಾರಣ



ರಾಜ್ಯಾಧ್ಯಕ್ಷ ಹನುಮಂತಗೌಡ ಕಲ್ಮನಿ ಮಾತನಾಡಿ, ಈ ಕೂಡಲೇ ಕೌನ್ಸೆಲಿಂಗ್ ನಿಲ್ಲಿಸಬೇಕು. ಅತಿಥಿ ಉಪನ್ಯಾಸಕರಿಗೆ ಏನಾದರು ಅನಾಹುತವಾದರೆ ಸರಕಾರವೇ ಕಾರಣ. ಕೂಡಲೇ ಜಿಲ್ಲಾ ಉಸ್ತುವಾರಿ ಸಚಿವರು ಸ್ಪಂದಿಸಿ ನಮಗೆ ನ್ಯಾಯ ನೀಡಲು ಮುಂದಾಗಬೇಕು ಎಂದು ಹೇಳಿದರು.

**■ವಿಜಯಸಾಕ್ಷಿ ಸುದ್ದಿ, ಗದಗ**

10ಕ್ಕೂ ಹೆಚ್ಚು ವರ್ಷಗಳ ಕಾಲ ಜ್ಞಾನಸುಧೆ ಹರಿಸಿದ ಅತಿಥಿ ಉಪನ್ಯಾಸಕರು ಸರಕಾರದ ದ್ವಂದ ನೀತಿಯಿಂದಾಗಿ ಬೀದಿಯಲ್ಲಿ ಕುಳಿತುಕೊಳ್ಳುವ ಪರಿಸ್ಥಿತಿ ನಿರ್ಮಾಣ ಮಾಡಿರುವುದೇ ಸರಕಾರದ ದೊಡ್ಡ ಸಾಧನೆಯಾಗಿದೆ ಎಂದು ಅತಿಥಿ ಉಪನ್ಯಾಸಕರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ವಿ.ಆರ್. ಗೊಂವಿದಗೌಡ್ರ ಸರಕಾರವನ್ನು ಟೀಕಿಸಿದರು.

ಗದಗ ಜಿಲ್ಲಾಧಿಕಾರಿ ಕಚೇರಿ ಎದುರು ರಾಜ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘ ಬೆಂಗಳೂರು, ಗದಗ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿರುವ ಅತಿಥಿ ಉಪನ್ಯಾಸಕರ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು.

ಭಾರತ ಆಹಾರ ನಿಗಮದ ರಾಜ್ಯ ಸಮಿತಿ ಸದಸ್ಯ, ಕೆವಿಎಸ್ಆರ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ರವಿ ದಂಡಿನ ಮಾತನಾಡಿ, ಅತಿಥಿ ಉಪನ್ಯಾಸಕರು ಬೀದಿಯಲ್ಲಿ ಕುಳಿತು ಹೋರಾಟ ಮಾಡುತ್ತಿದ್ದಾರೆ. ಇದನ್ನು ನೋಡುತ್ತಿರುವ ಅಧಿಕಾರಿಗಳು ಸೌಜನ್ಯಕ್ಕಾದರೂ ಮಾತನಾಡಿಸದಿರುವುದು ಖೇದಕರ. ಇವರಿಗೆ ನ್ಯಾಯ ನೀಡಬೇಕಾಗಿರುವ ಸರಕಾರ ಇವತ್ತು ಹಿರಿಯ ಅತಿಥಿ ಉಪನ್ಯಾಸಕರನ್ನು ಹೊರಗಿಟ್ಟು ಅನ್ಯಾಯ ಮಾಡುತ್ತಿರುವುದನ್ನು ನಿಲ್ಲಿಸಿ ಅವರಿಗೆ ಸರಕಾರ ಸೂಕ್ತ ನ್ಯಾಯ ಒದಗಿಸಿಕೊಡಬೇಕು ಮತ್ತು 6 ಸಾವಿರ ಅತಿಥಿ ಉಪನ್ಯಾಸಕರ ಬೆನ್ನಿಗೆ ನಿಲ್ಲುತ್ತೇವೆ ಎಂದು ಹೇಳಿದರು.

ಸಾಮಾಜಿಕ ಹೋರಾಟಗಾರ ರವಿಕಾಂತ ಅಂಗಡಿ, ಪ್ರೊ. ಉಮೇಶ ಹಿರೇಮಠ ಮಾತನಾಡಿದರು. ಅತಿಥಿ ಉಪನ್ಯಾಸಕರ ಹೋರಾಟ ದಿಢೀರನೆ ಉಗ್ರ ಸ್ವರೂಪವನ್ನು ಪಡೆದುಕೊಂಡು ಒಂದು ತಾಸಿಗೂ ಹೆಚ್ಚು ಕಾಲ ಗದಗ–ಹುಬ್ಬಳ್ಳಿ ರಸ್ತೆಯನ್ನು ತಡೆದು ಹೋರಾಟ ನಡೆಸಿದರು.

ಪೊಲೀಸರ ಮತ್ತು ಅತಿಥಿ ಉಪನ್ಯಾಸಕರ ಮಧ್ಯೆ ತೀವ್ರ ವಾಗ್ವಾದ ಪ್ರಾರಂಭವಾದಾಗ ಹುಲಕೋಟಿಯ ಕೆ.ಎಚ್. ಪಾಟೀಲ ಕಾಲೇಜಿನ ಮಹಿಳಾ ಅತಿಥಿ ಉಪನ್ಯಾಸಕಿ ನೂರಜಾನ ಕದಾಂಪುರ ತೀವ್ರ ಅಸ್ವಸ್ಥತೆಗೊಳಗಾದರು. ಪ್ರತಿಭಟನೆಯಲ್ಲಿ ಬೀದರ, ಗುಲಬುರ್ಗಾ, ಕಾರವಾರ, ಧಾರವಾಡ, ಬಾಗಲಕೋಟೆ, ವಿಜಯನಗರ, ಬಳ್ಳಾರಿ, ಹಾವೇರಿ, ತುಮಕೂರು ಸೇರಿದಂತೆ ವಿವಿಧ ಜಿಲ್ಲೆಗಳಿಂದ ಸಾವಿರಾರು ಅತಿಥಿ ಉಪನ್ಯಾಸಕರು ಪಾಲ್ಗೊಂಡಿದ್ದರು.

---

### ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

## ಮುಕ್ತ ಮನಸ್ಸಿನಿಂದ ಕ್ರೀಡೆಯಲ್ಲಿ ಭಾಗವಹಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಗದಗ ಜಿಲ್ಲಾ ಪೊಲೀಸ್ ವಾರ್ಷಿಕ ಕ್ರೀಡಾಕೂಟ ಜರುಗಿತು. ಈ ವೇಳೆ ಡಿ.ಎ.ಆರ್, ಗದಗ ಶಹರ ಮತ್ತು ವಿ. ಘಟಕ, ಬೆಟಗೇರಿ ವೃತ್ತ, ಗದಗ ಗ್ರಾಮೀಣ, ಮುಳಗುಂದ, ರೋಣ, ನರಗುಂದ, ಮುಂಡರಗಿ, ಶಿರಹಟ್ಟಿ ತಂಡಗಳು ಭಾಗವಹಿಸಿದ್ದವು.

ಕ್ರೀಡಾಕೂಟಕ್ಕೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹಾಗೂ ಎಸ್ಪಿ ರೋಹನ್ ಜಗದೀಶ್ ಚಾಲನೆ ನೀಡಿದರು. 2024ರ ವಯಕ್ತಿಕ ಚಾಂಪಿಯನ್ ಅನಿಲ ಬನ್ನಿಕೊಪ್ಪ ಅವರು ಕ್ರೀಡಾಜ್ಯೋತಿ ಬೆಳಗಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಮನಸ್ಸಿನ ನೆಮ್ಮದಿಗಾಗಿ ಕ್ರೀಡಾಕೂಟ ಮುಖ್ಯವಾಗಿದೆ. ಒಬ್ಬರೊನ್ನೊಬ್ಬರು ಅರ್ಥ ಮಾಡಿಕೊಳ್ಳಲು ಕ್ರೀಡೆಗಳು ಸಹಾಯವಾಗುತ್ತವೆ. ಗೆಲುವು–ಸೋಲು ಇದ್ದೇ ಇರುತ್ತದೆ.




ಇದರ ಹೊರತಾಗಿ ಕ್ರೀಡೆಗಳಲ್ಲಿ ಖುಷಿಯಿಂದ ಭಾಗವಹಿಸಬೇಕು. ಪ್ರತಿಜ್ಞಾ ವಿಧಿ ಸ್ವಿಕರಿಸಿದಂತೆ ಎಲ್ಲರೂ ಮುಕ್ತ ಮನಸ್ಸಿನಿಂದ ಆಟದಲ್ಲಿ ಭಾಗವಹಿಸಬೇಕು ಎಂದರು. ಜಿಲ್ಲಾ ಪೊಲೀಸ್ ಅಧೀಕ್ಷಕ ರೋಹನ್ ಜಗದೀಶ್ ಮಾತನಾಡಿ, ಪೊಲೀಸ್ ಸಿಬ್ಬಂದಿಗಳ ಒತ್ತಡದ ಕೆಲಸದ ನಡುವೆ ಉತ್ತಮ ಆರೋಗ್ಯಕ್ಕಾಗಿ ಕ್ರೀಡಾಕೂಟ ಆಯೋಜನೆ ಮಾಡಲಾಗಿದೆ. ನಮ್ಮ ತಂಡವನ್ನು ಗೆಲ್ಲಿಸುವ ಮೂಲಕ ನಮ್ಮ ಜಿಲ್ಲೆಯನ್ನು ಗೆಲ್ಲಿಸುವ ಉದ್ದೇಶ ಹೊಂದಲಾಗಿದ್ದು, ಎಲ್ಲ ಸಿಬ್ಬಂದಿಗಳು ಉತ್ತಮ ಪ್ರದರ್ಶನ ನೀಡಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಪ್ರಭುಗೌಡ, ಮುರ್ತುಜಾ ಖಾದ್ರಿ, ಮಾಂತೇಶ ಸಜ್ಜನ ಸೇರಿದಂತೆ ಜಿಲ್ಲೆಯ ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

---

## ಸರಕಾರಿ ಶಾಲೆಗಳಿಗೆ ಅಗತ್ಯ ಸೌಲಭ್ಯ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸರಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಕ್ಷೇತ್ರ ವ್ಯಾಪ್ತಿಯ ಶಾಲೆ, ಕಾಲೇಜುಗಳಿಗೆ ಅವಶ್ಯವಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕಾರ್ಯವನ್ನು ಹಂತ ಹಂತವಾಗಿ ಮಾಡಲಾಗುತ್ತಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಬುಧವಾರ ಪಟ್ಟಣದ ಎಪಿಎಂಸಿ ಹತ್ತಿರವಿರುವ ದಿ. ತೋಟಪ್ಪ ಬಸಪ್ಪ ಮಾನ್ವಿ ಸರಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಶೌಚಗೃಹ ಮತ್ತು ಪೇವರ್ಸ್ ಅಳವಡಿಸುವ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಈಗಾಗಲೇ ಶೌಚಗೃಹ, ಮೂತ್ರಾಲಯ, ಕುಡಿಯುವ ನೀರು, ಆಟದ ಮೈದಾನ ಇತ್ಯಾದಿಗಳ ಕೊರತೆ ಇರುವ ಶಾಲೆಗಳ ಪಟ್ಟಿ ಮಾಡಲಾಗಿದೆ. ಅವುಗಳನ್ನು ಹಂತ ಹಂತವಾಗಿ ಈಡೇರಿಸುವ ಕಾರ್ಯವನ್ನು ಮಾಡುತ್ತೇವೆ. ಸರಕಾರಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸುವದು ಅವಶ್ಯವಾಗಿದೆ ಎಂದರು.

ಈ ವೇಳೆ ಎಸ್‌ಡಿಎಂಸಿ ಅಧ್ಯಕ್ಷೆ ಸಾವಿತ್ರಿ ಕುರಿ, ಫಕ್ಕೀರೇಶ ರಟ್ಟಿಹಳ್ಳಿ, ಯಲ್ಲಪ್ಪ ಮೇಗೂರ, ಗೂಳಪ್ಪ ಹುರಕನವರ, ರಾಮಪ್ಪ ಟೋಕಾಳಿ, ಹನುಮಂತಪ್ಪ ಹಟ್ಟಿ, ನಿಂಗಪ್ಪ ಕಡ್ಡಿಪೂಜಾರ, ಬಸವರಾಜ ಕುಸುಗಲ್, ಸಿದ್ದಪ್ಪ ಕನವಳ್ಳಿ, ಮಂಜಪ್ಪ ಕೆರೂರ, ಯಲ್ಲಪ್ಪ ಕಡ್ಡಿಪೂಜಾರ, ಲಕ್ಷ್ಮವ್ವ ಮಳ್ಳಳ್ಳಿ, ನೀಲವ್ವ ಶ್ಯಾಗೋಟಿ, ಮಂಜವ್ವ ಮುಳಗುಂದ, ಲಲಿತಾ ಕೋಳಿವಾಡ, ಸುಮಂಗಳಾ ದೊಡ್ಡಮನಿ, ಮಾಳಪ್ಪ ಶರಸೂರಿ, ಲಕ್ಷ್ಮೀ ಬಳೂಟಗಿ, ಸಿಮ್ರಾನ್ ಬೇಪಾರಿ, ಹನುಮಂತಪ್ಪ ಶರಸೂರಿ, ಮುಖ್ಯೋಪಾಧ್ಯಾಯ ಎಸ್. ಎನ್. ಕ್ಷತ್ರಿ ಹಾಗೂ ಶಿಕ್ಷಕರಿದ್ದರು.

---

## ದಲಿತ ಎಂಬ ಕಾರಣಕ್ಕೆ ಅಯೋಧ್ಯೆ ಧ್ವಜಾರೋಹಣಕ್ಕೆ ನನ್ನನ್ನು ಆಹ್ವಾನಿಸಿಲ್ಲ: ಎಸ್‌ಪಿ ಸಂಸದ ಅವಧೇಶ್ ಪ್ರಸಾದ್

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಅಯೋಧ್ಯೆಯ ಶ್ರೀ ರಾಮ ಜನ್ಮಭೂಮಿ ದೇವಾಲಯದಲ್ಲಿ ನಡೆದ ಧ್ವಜಾರೋಹಣ ಸಮಾರಂಭಕ್ಕೆ ತಮ್ಮನ್ನು ಆಹ್ವಾನಿಸಲಾಗಿಲ್ಲ ಎಂದು ಸಮಾಜವಾದಿ ಪಕ್ಷದ ಸಂಸದ ಅವಧೇಶ್ ಪ್ರಸಾದ್ ಹೇಳಿದ್ದಾರೆ. ದಲಿತ ಸಮುದಾಯಕ್ಕೆ ಸೇರಿದವರಾಗಿರುವುದರಿಂದ ನನ್ನನ್ನು ಹೊರಗಿಡಲಾಗಿದೆ ಎಂದು ಅವರು ಆರೋಪಿಸಿದ್ದಾರೆ.

“ಪ್ರಸಾದ್ ಅವರನ್ನು ಅವರ ಜಾತಿಯ ಕಾರಣದಿಂದ ನಿರ್ಲಕ್ಷಿಸಲಾಗಿದೆ” ಎಂದು ಅವರ ಹೇಳಿಕೆಗಳನ್ನು ಕಾಂಗ್ರೆಸ್ ಸಂಸದರೊಬ್ಬರು ಬೆಂಬಲಿಸಿದ್ದಾರೆ. ಆದರೆ, ಈ ಆರೋಪಗಳನ್ನು ಬಿಜೆಪಿ ಆಧಾರರಹಿತ ಎಂದು ತಿರಸ್ಕರಿಸಿದೆ.

ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್, ರಾಜ್ಯಪಾಲ ಆನಂದಿಬೆನ್ ಪಟೇಲ್ ಸೇರಿದಂತೆ ಹಲವು ಸಂತರು, ಬುಡಕಟ್ಟು ಗುಂಪುಗಳು ಮತ್ತು ಅನೇಕ ಭಕ್ತರ ಸಮ್ಮುಖದಲ್ಲಿ ದೇವಾಲಯದ ಶಿಖರದ ಮೇಲೆ ಕೇಸರಿ ಧ್ವಜವನ್ನು ಹಾರಿಸಿದರು. ಅದೇ ದಿನ, ಅವಧೇಶ್ ಪ್ರಸಾದ್ ಅವರು ಎಕ್ಸ್‌ನಲ್ಲಿ ತಮ್ಮನ್ನು ಆಹ್ವಾನಿಸಲಾಗಿಲ್ಲ ಎಂದು ಬರೆದಿದ್ದಾರೆ.

“ನಾನು ದಲಿತ ಸಮಾಜದಿಂದ ಬಂದವನಾಗಿರುವುದರಿಂದ ಧಾರ್ಮಿಕ ಧ್ವಜವನ್ನು ಸ್ಥಾಪಿಸಿದ್ದಕ್ಕಾಗಿ ನನ್ನನ್ನು ಕಾರ್ಯಕ್ರಮಕ್ಕೆ ಕರೆಯಲಾಗಿಲ್ಲ. ಇದು ರಾಮನ ಘನತೆ ಅಲ್ಲ. ಇದು ಯಾರೊಬ್ಬರ ಸಂಕುಚಿತ ಚಿಂತನೆಯನ್ನು ತೋರಿಸುತ್ತದೆ. ರಾಮು ಎಲ್ಲರಿಗೂ ಸೇರಿದವನು. ನನ್ನ ಹೋರಾಟ ಯಾವುದೇ ಹುದ್ದೆ ಅಥವಾ ಆಹ್ವಾನಕ್ಕಾಗಿ ಅಲ್ಲ, ಅದು ಗೌರವ, ಸಮಾನತೆ ಮತ್ತು ಸಂವಿಧಾನದ ಘನತೆಗಾಗಿ” ಎಂದು ಅವರು ಹೇಳಿದರು.

ಧ್ವಜಾರೋಹಣಕ್ಕೂ ಒಂದು ದಿನ ಹಿಂದೆ ಪ್ರಸಾದ್ ಅವರು, ನನಗೆ ಯಾವುದೇ ಆಹ್ವಾನ ಬಂದಿಲ್ಲ. ಆಹ್ವಾನ ಬಂದರೆ, ನಾನು ನನ್ನ ಎಲ್ಲಾ ಕೆಲಸಗಳನ್ನು ಬಿಟ್ಟು ಬರಿಗಾಲಿನಲ್ಲಿ ಹೋಗುತ್ತೇನೆ ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದರು.

---

## ವಿಕಲಚೇತನರನ್ನು ಪ್ರೋತ್ಸಾಹಿಸಿವುದು ಸಮಾಜದ ಜವಾಬ್ದಾರಿ



**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ವಿಕಲಚೇತನತೆ ಎಂಬುದು ದೌರ್ಬಲ್ಯವಲ್ಲ. ಅವರಲ್ಲಿ ವಿಶೇಷ ಚೈತನ್ಯ, ಕೌಶಲ್ಯ ಇರುತ್ತದೆ. ಆತ್ಮಸ್ಥೈರ್ಯದಿಂದ ಸಾಧನೆಗೆ ಮುಂದಾಗಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿ ಡಾ. ಕಮಲಾ ಬೈಲೂರ ಹೇಳಿದರು.

ಅವರು ಗುರುವಾರ ಬೆಳಿಗ್ಗೆ ನಗರದ ಆರ್.ಎನ್. ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಾನಗರ ಪಾಲಿಕೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಿದ್ದ ವಿಕಲಚೇತನರ ಕ್ರೀಡಾ ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ವಿಕಲಚೇತನರಿಗೆ ಅಗತ್ಯವಾದ ಸಹಾಯ, ಪ್ರೋತ್ಸಾಹ, ಸೌಲಭ್ಯಗಳನ್ನು ಒದಗಿಸುವುದು ಸರ್ಕಾರ ಮತ್ತು ಸಮಾಜದ ಜವಾಬ್ದಾರಿ. ಕೇವಲ ದಯೆ ಅಥವಾ ಕರುಣೆಯ ದೃಷ್ಟಿಯಿಂದ ನೋಡದೇ, ಅವರಲ್ಲಿರುವ ಕೌಶಲ್ಯ, ಪ್ರತಿಭೆ, ಹಾಗೂ ಸಾಮರ್ಥ್ಯಗಳನ್ನು ಗುರುತಿಸಿ, ವೇದಿಕೆ ಕಲ್ಪಿಸುವುದು ಮುಖ್ಯ ಎಂದು ಅವರು ಹೇಳಿದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ಬಸೀರ್ ಅಹಮ್ಮದ ಜಮಾದಾರ ಮಾತನಾಡಿ, ವಿಕಲಚೇತನರ ಸಾಮರ್ಥ್ಯಕ್ಕೆ ವೇದಿಕೆ ಕಲ್ಪಿಸುವುದು ಸಮಾಜದ ಎಲ್ಲರ ಕರ್ತವ್ಯ. ಅವರನ್ನು ಪ್ರೋತ್ಸಾಹಿಸುವ ಮನೋಭಾವ ಎಲ್ಲರಿಗೂ ಸ್ಫೂರ್ತಿದಾಯಕವಾದದ್ದು ಎಂದು ಹೇಳಿದರು.

ವೇದಿಕೆಯಲ್ಲಿ ಮಜೇಥಿಯಾ ಪೌಂಡೇಶನ ಸಿಇಓ ಡಾ. ಸುನೀಲಕುಮಾರ ಕುಕನೂರ, ವಿಶ್ವಧರ್ಮ ಸಮೂಹ ಸಂಸ್ಥೆಯ ಕಾರ್ಯದರ್ಶಿ ಐ.ಕೆ. ಲಕ್ಕುಂಡಿ, ಪ್ರಿಯದರ್ಶಿನಿ ಶ್ರವಣ ನ್ಯೂನತೆಯುಳ್ಳ ಮಕ್ಕಳ ಶಾಲೆಯ ಅಧ್ಯಕ್ಷ ಡಿ.ಡಿ. ಮೆಚ್ಚಣ್ಣವರ, ವಿಶ್ವಧರ್ಮ ಬುದ್ಧಿಮಾಂದ್ಯ ಮಕ್ಕಳ ಶಾಲೆಯ ಅಧೀಕ್ಷಕ ಗುರು ಲಕ್ಕುಂಡಿ ಹಾಗೂ ಸರ್ಕಾರಿ ಅಂಧ ಮಕ್ಕಳ ಶಾಲೆಯ ಅಧೀಕ್ಷಕ ಎಮ್. ಆರ್. ಸಾಬೋಜಿ ಇದ್ದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸವಿತಾ ಕಾಳೆ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಹುಬ್ಬಳ್ಳಿ ಸರಕಾರಿ ಅಂಧ ಬಾಲಕರ ಶಾಲೆಯ ಶಿಕ್ಷಕ ಅಣ್ಣಪ್ಪ ಕೋಳಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

## ಚಿತ್ರಕಲಾ ಸ್ಪರ್ಧೆಯಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ರಾಷ್ಟ್ರೀಯ ಸಂವಿಧಾನ ದಿನಾಚರಣೆ ಅಂಗವಾಗಿ 'ನನ್ನ ಮತ–ನನ್ನ ಹಕ್ಕು' ವಿಷಯವಾಗಿ ಗದಗ ಜಿಲ್ಲಾಡಳಿತ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಚಿತ್ರಕಲಾ ಸ್ಪರ್ಧೆಯಲ್ಲಿ ಇಲ್ಲಿಯ ಬಾಲಕಿಯರ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ದೀಪಾ ಮಧುಕರ ಭಾಗವಹಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ಗದಗ ಅಂಬೇಡ್ಕರ ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಜಿಲ್ಲಾಧಿಕಾರಿಗಳು, ಶಿಕ್ಷಣಾಧಿಕಾರಿಗಳು ಸೇರಿದಂತೆ ಜನಪ್ರತಿನಿಧಿಗಳು ವಿದ್ಯಾರ್ಥಿನಿ ದೀಪಾಳನ್ನು ಸನ್ಮಾನಿಸಿ ಗೌರವಿಸಿದರು. ಇವಳಿಗೆ ಮಾರ್ಗದರ್ಶನ ನೀಡಿದ ಚಿತ್ರಕಲಾ ಶಿಕ್ಷಕಿ ಸರೋಜಾ ಮುಂಡೆವಾಡೆ ಹಾಗೂ ಸಾಧಕ ವಿದ್ಯಾರ್ಥಿನಿಯನ್ನು ಗ್ರಾ.ಪಂ ಅಧ್ಯಕ್ಷರು, ಸದಸ್ಯರು, ಎಸ್.ಡಿ.ಎಂ.ಸಿ ಅಧ್ಯಕ್ಷರು, ಸದಸ್ಯರು, ಮುಖ್ಯೋಪಾಧ್ಯಾಯ ವೈ.ಎಚ್. ತೆಕ್ಕಲಕೋಟಿ ಹಾಗೂ ಶಿಕ್ಷಕ ಬಳಗದವರು ಅಭಿನಂದಿಸಿದ್ದಾರೆ.



## ಸಂವಿಧಾನ ದಿನ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಬಡವರ ಹಿತರಕ್ಷಣಾ ವೇದಿಕೆ ಗದಗ ಜಿಲ್ಲಾ ಸಂಘಟನೆ ವತಿಯಿಂದ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ಎಂ. ಅಣ್ಣಯ್ಯ ಅವರ ಆದೇಶದಂತೆ ಗದಗ–ಬೆಟಗೇರಿ ನಗರಸಭೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಸಂವಿಧಾನ ದಿನ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಸಂಘಟನೆಯ ರಾಜ್ಯಾಧ್ಯಕ್ಷರಾದ ರವಿ ನಾಯಕ್, ಜಿಲ್ಲಾಧ್ಯಕ್ಷರಾದ ಪ್ರಶಾಂತ್ ಪೂಜಾರ್, ಜಿಲ್ಲಾ ಮಹಿಳಾ ಅಧ್ಯಕ್ಷರಾದ ಆರಾಧನಾ ಬಣಕಾರ್, ಜಿಲ್ಲಾ ಯುವ ಸಂಘಟನೆ ಅಧ್ಯಕ್ಷರಾದ ಅಯ್ಯಪ್ಪ ವಾಲ್ಮೀಕಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಧರ್ಮಣ್ಣ ತಳವಾರ್, ತಾಲೂಕು ಅಧ್ಯಕ್ಷರಾದ ಇದ್ರಿಸ ಮುಲ್ಲಾ, ವಿನಾಯಕ ಅಂಜಿಗಿ, ಸಲೀಂ ಬೊದ್ಲೆಖಾನ್, ಆನಂದ್, ಪ್ರಜ್ವಲ್ ಪೂಜಾರ್ ಸೇರಿದಂತೆ ಸಂಘಟನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

### ಲಿಂ. ಶ್ರೀಮದ್ ರಂಭಾಪುರಿ ಶಿವಾನಂದ ಜಗದ್ಗುರುಗಳ ಪೀಠಾರೋಹಣ ಶತಮಾನೋತ್ಸವ ಸಮಾರಂಭ

# ಗುರು ದರ್ಶನದಿಂದ ಜೀವನ ಪಾವನ



ಕೇಂದ್ರದ ರೈಲ್ವೆ ಮತ್ತು ಜಲಶಕ್ತಿ ಖಾತೆಯ ಸಚಿವ ವಿ.ಸೋಮಣ್ಣ ಮಾತನಾಡಿ ವೀರಶೈವ ಧರ್ಮದ ಇತಿಹಾಸದಲ್ಲಿ ಅವಿಸ್ಮರಣೀಯವಾದ ದಿನ ಇಂದು. ಭೂಲೋಕದ ಸ್ವರ್ಗದಂತಿರುವ ಶ್ರೀ ರಂಭಾಪುರಿ ಪೀಠದ ಪರಿಸರದಲ್ಲಿ ಲಿಂ. ಶ್ರೀ ರಂಭಾಪುರಿ ಶಿವಾನಂದ ಜಗದ್ಗುರುಗಳ ಪೀಠಾರೋಹಣದ ಶತಮಾನೋತ್ಸವ ಸಮಾರಂಭದಲ್ಲಿ ಪಾಲ್ಗೊಂಡಿರುವುದು ನನಗೆ ಬಹಳಷ್ಟು ಸಂತಸ ತಂದಿದೆ. ಲಿಂ. ಶ್ರೀ ಶಿವಾನಂದ ಜಗದ್ಗುರುಗಳು ವೀರಶೈವ ಧರ್ಮ ಸಂಸ್ಕೃತಿಯ ಸಂವರ್ಧನೆಗೆ ಬಹಳಷ್ಟು ಶ್ರಮಿಸಿರುವುದನ್ನು ಕಾಣುತ್ತೇವೆ. ಇತ್ತೀಚೆಗೆ ದಾವಣಗೆರೆಯಲ್ಲಿ ಜರುಗಿದ ವೀರಶೈವ ಪೀಠಾಚಾರ್ಯರ ಹಾಗೂ ಶಿವಾಚಾರ್ಯರ ಶೃಂಗ ಸಮ್ಮೇಳನದಲ್ಲಿ ಕೈಗೊಂಡ ನಿರ್ಣಯಗಳು ಅತ್ಯಂತ ಮಹತ್ವದ್ದಾಗಿವೆ. ಚಿಕ್ಕಮಗಳೂರು–ಬಾಳೆಹೊನ್ನೂರು–ಶೃಂಗೇರಿ ರಸ್ತೆ ಮಾರ್ಗವನ್ನು ಶೀಘ್ರದಲ್ಲಿಯೇ ರಾಷ್ಟ್ರೀಯ ಹೆದ್ದಾರಿಯನ್ನಾಗಿ ಪರವರ್ತಿಸಲಾಗುವುದು ಎಂದರು.

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಬಹು ಜನ್ಮಗಳ ಪುಣ್ಯ ಫಲದಿಂದ ಮಾನವ ಜೀವನ ದೊರೆತಿದೆ. ಗುರುವಿನ ಕಾರುಣ್ಯ ಎಲ್ಲರಿಗೂ ಬೇಕು. ಗುರು ಪೀಠಗಳ ದರ್ಶನದಿಂದ ಜೀವನ ಪಾವನಗೊಳ್ಳುವುದೆಂದು ಮೈಸೂರು ರಾಜ ಮನೆತನದ ಯದುವೀರ ಕೃಷ್ಣದತ್ತ ಚಾಮರಾಜೇಂದ್ರ ಒಡೆಯರ್ ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಿದ ಲಿಂ. ಶ್ರೀಮದ್ ರಂಭಾಪುರಿ ಶಿವಾನಂದ ಜಗದ್ಗುರುಗಳ ಪೀಠಾರೋಹಣ ಶತಮಾನೋತ್ಸವ ಸಮಾರಂಭವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡುತ್ತಿದ್ದರು.

ಮನುಷ್ಯ ಜೀವನದಲ್ಲಿ ಸಾಧಿಸಿದ್ದು ಅಲ್ಪ. ಸಾಧಿಸಬೇಕಾದದ್ದು ಬಹಳಷ್ಟಿದೆ. ದೇವರು, ಧರ್ಮ ಮತ್ತು ಗುರುವಿನಲ್ಲಿ ನಂಬಿಕೆ ಇರಬೇಕಾಗುತ್ತದೆ. ಶ್ರೀ ರಂಭಾಪುರಿ ಪೀಠಕ್ಕೂ ಮತ್ತು ಮೈಸೂರು ರಾಜ ಮನೆತನಕ್ಕೂ ಪೂರ್ವದಿಂದಲೂ ನಿಕಟ ಸಂಬಂಧವಿರುವ ಇತಿಹಾಸವನ್ನು ಕಾಣುತ್ತೇವೆ. ಚಾಮರಾಜ ಒಡೆಯರ್, ನಾಲ್ವಡಿ ಕೃಷ್ಣರಾಜ ಒಡೆಯರ್ ಮತ್ತು ಜಯಚಾಮರಾಜ ಒಡೆಯರ್ ಈ ಕ್ಷೇತ್ರಕ್ಕೆ ಆಗಮಿಸಿ ಆಶೀರ್ವಾದ ಪಡೆದ ಸಂಗತಿ ತಿಳಿದು ನಮಗೆ ಬಹಳ ಹರುಷವಾಗಿದೆ. ಲಿಂ. ಶ್ರೀ ರಂಭಾಪುರಿ ಶಿವಾನಂದ ಜಗದ್ಗುರುಗಳು ಶ್ರೀ ರಂಭಾಪುರಿ ಪೀಠದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸಿದವರು. ಅಂಥ ಪರಮ ಪೂಜ್ಯರು ಮೈಸೂರು ಸಂಸ್ಥಾನಕ್ಕೆ ದಯಮಾಡಿಸಿ ಆಶೀರ್ವದಿಸಿದ ಆ ಘಳಿಗೆ ಅಮೂಲ್ಯವಾದುದು ಎಂದರು.

ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯರು, ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯರು, ಸುಳ್ಳ ಶಿವಸಿದ್ಧರಾಮೇಶ್ವರ ಶಿವಾಚಾರ್ಯರು, ಬಂಕಾಪುರ ರೇವಣಸಿದ್ಧ ಶಿವಾಚಾರ್ಯರು, ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರನ್ನು ಮೊದಲ್ಗೊಂಡು ಸುಮಾರು 50ಕ್ಕೂ ಹೆಚ್ಚು ಮಠಾಧೀಶರು ವೇದಿಕೆ ಮೇಲೆ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಜಮಖಂಡಿ ಶಾಸಕ ಜಗದೀಶ ಗುಡಗುಂಟಿ ವೀರಶೈವ ಧರ್ಮದ ಕೀರ್ತಿ ಕಳಸ ಕೃತಿ, ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರು ಶ್ರೀ ರಂಭಾಪುರಿ ಶಿವಾನಂದ ಜಗದ್ಗುರುಗಳ ಜೀವನ ದರ್ಶನ ಕೃತಿಯನ್ನು ಬಿಡುಗಡೆ ಮಾಡಿ ಮಾತನಾಡಿದರು.

ಶಾಸಕ ಟಿ.ಡಿ. ರಾಜೇಗೌಡ, ಮಾಜಿ ಸಚಿವ ಡಿ.ಎನ್. ಜೀವರಾಜ್, ಅ.ಭಾ.ವೀ.ಲಿಂ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಹೆಚ್.ಎಂ. ಲೋಕೇಶ್, ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾಸಂಸ್ಥೆ ಅಧ್ಯಕ್ಷ ಯು.ಎಂ. ಬಸವರಾಜ ಮತ್ತು ಆಡಳಿತ ಮಂಡಳಿಯ ಸದಸ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು. ಗಿಣಿವಾರದ ಕೊಡಚಾದ್ರಿ ವಿದ್ಯಾ ಸಂಸ್ಥೆಯ ಮಕ್ಕಳು ಭರತನಾಟ್ಯ ಪ್ರದರ್ಶನ ನೀಡಿದರು.

## ಮೊದಲ ಪತ್ನಿಗೆ ಮುಸ್ಲಿಂ ಪತಿ ಜೀವನಾಂಶ ನಿರಾಕರಿಸುವಂತಿಲ್ಲ: ಕೇರಳ ಹೈಕೋರ್ಟ್

■ವಿಜಯಸಾಕ್ಷಿ ಸುದ್ದಿ, ಕೇರಳ

ಎರಡನೇ ಪತ್ನಿಯ ಮೇಲಿನ ಆರ್ಥಿಕ ಜವಾಬ್ದಾರಿ ಕುರಿತ ಮಹತ್ವದ ತೀರ್ಪಿನಲ್ಲಿ, ಮುಸ್ಲಿಂ ಪುರುಷನು ತನ್ನ ಮೊದಲ ಪತ್ನಿಗೆ ಜೀವನಾಂಶ ಪಾವತಿಸುವುದನ್ನು ತಪ್ಪಿಸಲು ಸಾಧ್ಯವಿಲ್ಲ ಎಂದು ಕೇರಳ ಹೈಕೋರ್ಟ್ ಹೇಳಿದೆ. ಎಲ್ಲ ಪತ್ನಿಯರನ್ನು ಸಮಾನವಾಗಿ ಮತ್ತು ನ್ಯಾಯಯುತವಾಗಿ ನಡೆಸಿಕೊಂಡರೆ ಮಾತ್ರ ಮುಸ್ಲಿಂ ವೈಯಕ್ತಿಕ ಕಾನೂನಿನಡಿಯಲ್ಲಿ ಬಹುಪತ್ನಿತ್ವಕ್ಕೆ ಅವಕಾಶವಿದೆ ಎಂದು ಒತ್ತಿ ಹೇಳಿದೆ ಎಂದು 'ಲೈವ್ ಲಾ' ಬುಧವಾರ ವರದಿ ಮಾಡಿದೆ.

ತನ್ನ ಮೊದಲ ಪತ್ನಿಗೆ ಜೀವನಾಂಶ ನೀಡಿದ ಕೌಟುಂಬಿಕ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಪತಿ ಸಲ್ಲಿಸಿದ್ದ ಪರಿಷ್ಕರಣಾ ಅರ್ಜಿಗಳನ್ನು ವಜಾಗೊಳಿಸುವ ಸಂದರ್ಭದಲ್ಲಿ ನ್ಯಾಯಮೂರ್ತಿ ಕೌಸರ್ ಎಡಪ್ಪಗತ್ ಈ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ. ಪತಿ ತಾನು ನಿರುದ್ಯೋಗಿ, ತನ್ನ ಮೊದಲ ಪತ್ನಿ ಬ್ಯೂಟಿ ಪಾರ್ಲರ್ ನಡೆಸುವ ಮೂಲಕ ತನ್ನ ಜೀವನೋಪಾಯವನ್ನು ಸಂಪಾದಿಸಿಕೊಂಡಿದ್ದಾಳೆ. 2015 ರಲ್ಲಿ ಸಾಕಷ್ಟು ಕಾರಣವಿಲ್ಲದೆ ಆಕೆ ವೈವಾಹಿಕ ಮನೆಯನ್ನು ತೊರೆದಿದ್ದಾಳೆ ಎಂದು ಪತಿ ಹೇಳಿಕೊಂಡಿದ್ದು, ಆದ್ದರಿಂದ ಕ್ರಿಮಿನಲ್ ಪ್ರಕ್ರಿಯಾ ಸಂಹಿತೆಯ ಸೆಕ್ಷನ್ 125(4) ರ ಅಡಿಯಲ್ಲಿ ಜೀವನಾಂಶಕ್ಕೆ ಅವಳು ಅರ್ಹಳಲ್ಲ ಎಂದು ವಾದಿಸಿದರು.

ತನ್ನ ಎರಡನೇ ಪತ್ನಿಯನ್ನು ಕಾಪಾಡಿಕೊಳ್ಳಲು ತಾನು ಬದ್ಧನಾಗಿದ್ದೇನೆ, ಅವರ ವಯಸ್ಕ ಮಗ ಈಗಾಗಲೇ ಮೊದಲ ಪತ್ನಿಯನ್ನು ಬೆಂಬಲಿಸುತ್ತಿದ್ದಾನೆ. ಆದ್ದರಿಂದ ಅವನ ವಿರುದ್ಧದ ಆಕೆಯ ಹಕ್ಕು ಕಾನೂನುಬದ್ಧವಾಗಿ ಸಮರ್ಥನೀಯವಲ್ಲ ಎಂದು ಅವರು ವಾದಿಸಿದರು.

## ರೇಲ್ವೆ ಕೆಳಸೇತುವೆ ಸಂಚಾರಕ್ಕೆ ಮುಕ್ತಗೊಳಿಸಿ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಅಬ್ದುಲ್‌ಕಲಾಂ ಶಾದಿ ಮಹಲ್ ಹತ್ತಿರದ ರೇಲ್ವೆ ಕೆಳಸೇತುವೆಗೆ ಇಲಾಖೆಯು ವಾಹನ ಸಂಚಾರ ಆಗದಂತೆ ರಸ್ತೆಗೆ ಅಡ್ಡಲಾಗಿ ಹಳಿ ನಿಲ್ಲಿಸಿದ್ದು, ಇದರಿಂದಾಗಿ ಗದಗ–ಬೆಟಗೇರಿ ಅವಳಿ ನಗರಕ್ಕೆ ಸಂಪರ್ಕ ಇಲ್ಲದಂತಾಗಿದೆ.

ವಿಶೇಷವಾಗಿ ಇಲ್ಲಿನ ಸರಸ್ವತಿ ಕಲ್ಯಾಣಮಂಟಪದ ಹಿಂದೆ ಇರುವ ಸರ್ಕಾರಿ ಆಸ್ಪತ್ರೆಗೆ ಹೋಗಿ ಬರುವ ಅಂಬುಲೆನ್ಸ್‌ಗಳಿಗೆ, ಅಟೋ ರಿಕ್ಷಾ, ಕಾರು, ಎತ್ತು–ಚಕ್ಕಡಿ, ಶಾಲಾ ಕಾಲೇಜುಗಳ ಮಿನಿ ಬಸ್ ಸಂಚಾರಕ್ಕೆ ತೀವ್ರ ತೊಂದರೆ ಆಗಿದೆ.

ಈ ಸಮಸ್ಯೆಯನ್ನು ಸರಿಪಡಿಸಿ ಮೊದಲಿನಂತೆ ಸಂಚಾರವನ್ನು ಸುಗಮಗೊಳಿಸುವ ನಿಟ್ಟಿನಲ್ಲಿ ಸಂಸದರಾದ ಬಸವರಾಜ ಬೊಮ್ಮಾಯಿ, ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ, ಜಿಲ್ಲಾಡಳಿತ, ನಗರಸಭೆ, ರೇಲ್ವೆ ಇಲಾಖೆ ಅಗತ್ಯ ತುರ್ತು ಕ್ರಮ ಕೈಗೊಳ್ಳಬೇಕೆಂದು ಗದಗ–ಬೆಟಗೇರಿ ನಗರಸಭೆಯ ಸದಸ್ಯ ರಾಘವೇಂದ್ರ ಯಳವತ್ತಿ, ಮಾಜಿ ಸದಸ್ಯ ಅಮೀನಸಾಬ ಕಾಗದಾರ, ಶರಣಪ್ಪ ಗದ್ದಿಕೇರಿ ಆಗ್ರಹಿಸಿದ್ದಾರೆ.

# ಹಿರಿಯ ನಾಯಕರೊಂದಿಗೆ ಚರ್ಚಿಸಿ ಸಿಎಂ ಬದಲಾವಣೆ ಗೊಂದಲಕ್ಕೆ ತೆರೆ : ಮಲ್ಲಿಕಾರ್ಜುನ ಖರ್ಗೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದಲ್ಲಿ ಹೆಚ್ಚುತ್ತಿರುವ ನಾಯಕತ್ವದ ಜಗಳವನ್ನು ಪರಿಹರಿಸಲು ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸೇರಿದಂತೆ ಪಕ್ಷದ ಹಿರಿಯ ನಾಯಕರೊಂದಿಗೆ ನವದೆಹಲಿಯಲ್ಲಿ ಸಭೆ ನಡೆಸುವುದಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗುರುವಾರ (ನ.27) ಹೇಳಿದ್ದಾರೆ.

ನವೆಂಬರ್ 20ಕ್ಕೆ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಎರಡೂವರೆ ವರ್ಷಗಳನ್ನು ಪೂರ್ಣಗೊಳಿಸಿದೆ. ಆ ನಂತರ ಮುಖ್ಯಮಂತ್ರಿ ಬದಲಾವಣೆಯ ಚರ್ಚೆ ತೀವ್ರಗೊಂಡಿದೆ. ಈ ಕುರಿತ ಊಹಾಪೋಹಗಳು, ಗೊಂದಲಗಳನ್ನು ಪರಿಹರಿಸುವುದು ಮತ್ತು ಪಕ್ಷದ ಭವಿಷ್ಯ ರೂಪಿಸುವುದರ ಕುರಿತು ಸಭೆಯಲ್ಲಿ ಚರ್ಚಿಸಲಾಗುವುದು ಎಂದಿದ್ದಾರೆ.



ಐದು ವರ್ಷದ ಕಾಂಗ್ರೆಸ್ ಆಡಳಿತಾವಧಿಯಲ್ಲಿ ತಲಾ ಎರಡೂವರೆ ವರ್ಷ ಸಿದ್ದರಾಮಯ್ಯ ಮತ್ತು ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿಯಾಗುವ ಒಪ್ಪಂದ ಆಗಿದೆ ಎಂಬ ವರದಿಗಳು ರಾಜ್ಯದಲ್ಲಿ ಸಿಎಂ ಬದಲಾವಣೆಯ ಚರ್ಚೆಯನ್ನು ಹೆಚ್ಚಿಸಿದೆ.

"ನಾನು ಮೂರು ಅಥವಾ ನಾಲ್ಕು ಪ್ರಮುಖ ನಾಯಕರನ್ನು ಕರೆದು ಚರ್ಚೆ ನಡೆಸುತ್ತೇನೆ. ಅದರ ನಂತರ, ಸಮಸ್ಯೆಯನ್ನು ಹೇಗೆ ಇತ್ಯರ್ಥಪಡಿಸುವುದು ಮತ್ತು ಮುಂದುವರಿಯುವುದು ಎಂಬುದನ್ನು ನಾವು ನಿರ್ಧರಿಸುತ್ತೇವೆ" ಎಂದು ಖರ್ಗೆ ಸುದ್ದಿಗಾರರಿಗೆ ತಿಳಿಸಿದ್ದಾರೆ. ರಾಹುಲ್ ಗಾಂಧಿ ಅವರೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಚರ್ಚೆಗಳಲ್ಲಿ ಭಾಗವಹಿಸುತ್ತಾರೆ ಎಂಬುವುದನ್ನು ಖರ್ಗೆ ದೃಢಪಡಿಸಿದ್ದಾರೆ.

ಹೆಚ್ಚುತ್ತಿರುವ ಗದ್ದಲದ ಮಧ್ಯೆ, ಸಿದ್ದರಾಮಯ್ಯ ಗುರುವಾರ ತಮ್ಮ ನಿವಾಸದಲ್ಲಿ ತಮ್ಮ ಆಪ್ತ ಬಳಗದ ಡಾ. ಜಿ. ಪರಮೇಶ್ವರ್, ಸತೀಶ್ ಜಾರಕಿಹೊಳಿ, ಎಚ್.ಸಿ. ಮಹದೇವಪ್ಪ, ಕೆ. ವೆಂಕಟೇಶ್ ಮತ್ತು ಕೆ.ಎನ್. ರಾಜಣ್ಣ ಸೇರಿದಂತೆ ಹಿರಿಯ ಸಚಿವರು ಮತ್ತು ಇತರ ನಾಯಕರನ್ನು ಭೇಟಿಯಾಗಿದ್ದಾರೆ ಎಂದು ವರದಿಗಳು ತಿಳಿಸಿವೆ.

## ಮಹಾಂತೇಶ ಬೀಳಗಿ ನಿಧನಕ್ಕೆ ತೋಂಟದ ಶ್ರೀ ಶೋಕ

■ವಿಜಯಸಾಕ್ಷಿ ಸುದ್ದಿ, ಗದಗ

ಹಿರಿಯ ಐಎಎಸ್ ಅಧಿಕಾರಿ ಮಹಾಂತೇಶ ಬೀಳಗಿ ಅವರು ರಸ್ತೆ ಅಪಘಾತದಲ್ಲಿ ನಿಧನರಾಗಿರುವುದು ಅತ್ಯಂತ ದುಃಖಕರವಾದ ಸಂಗತಿ. ಶ್ರೀಯುತರು ಸ್ವಪ್ರಯತ್ನದಿಂದ ಕೆ.ಪಿ.ಎಸ್.ಸಿ ಪರೀಕ್ಷೆ ಉತ್ತೀರ್ಣರಾಗಿ ಐಎಎಸ್ ಹುದ್ದೆಗೇರಿ, ದಕ್ಷ ಮತ್ತು ಪ್ರಾಮಾಣಿಕ ಅಧಿಕಾರಿಗಳೆಂದೇ ಹೆಸರುವಾಸಿಯಾಗಿದ್ದರು ಎಂದು ಡಂಬಳ–ಗದಗ ಜಗದ್ಗುರು ತೆ–ೂಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ತಮ್ಮ ಶೋಕ ವ್ಯಕ್ತಪಡಿಸಿದ್ದಾರೆ.



ನಮ್ಮ ಶ್ರೀಮಠದ ವಿದ್ಯಾಸಂಸ್ಥೆಯಲ್ಲಿ ತರಬೇತಿ ಪಡೆದಿದ್ದ ಅವರು ಬೆಳಗಾವಿ, ಬೀದರ, ದಾವಣಗೆರೆ ಮುಂತಾದ ಜಿಲ್ಲೆಗಳಲ್ಲಿ ಉಪವಿಭಾಗಾಧಿಕಾರಿಯಾಗಿ, ಜಿಲ್ಲಾ ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಯಾಗಿ, ಜಿಲ್ಲಾಧಿಕಾರಿಯಾಗಿ, ಪ್ರಸ್ತುತ ಕರ್ನಾಟಕ ಖನಿಜ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿದ್ದರು. ಸಾಮಾಜಿಕ ಕಳಕಳಿ, ಶಿಕ್ಷಣ ಪ್ರೇಮ ಹೊಂದಿದ್ದ ಮಹಾಂತೇಶ ಬೀಳಗಿ ಅವರ ಅಕಾಲಿಕ ನಿಧನವು ನಮ್ಮ ಸಮಾಜಕ್ಕೆ ತನ್ಮೂಲಕ ನಮ್ಮ ರಾಜ್ಯಕ್ಕೆ ತುಂಬಲಾಗದ ನಷ್ಟವನ್ನುಂಟು ಮಾಡಿದೆ.

ಸದಾ ವಿಭೂತಿಧಾರಣ ಮಾಡಿಕೊಂಡು ಹಸನ್ಮುಖಿಯಾಗಿ, ಲವಲವಿಕೆಯಿಂದ ಇರುತ್ತಿದ್ದ ಮಹಾಂತೇಶ ಬೀಳಗಿ ಯುವಕರಿಗೆ ವಿಶೇಷವಾಗಿ ವಿದ್ಯಾರ್ಥಿಗಳಿಗೆ ಸ್ಫೂರ್ತಿಯ ಚೇತನವಾಗಿದ್ದರು. ಜನಸಾಮಾನ್ಯರ ಕಷ್ಟಗಳಿಗೆ ಮಿಡಿಯುವ ಹೃದಯ ವೈಶಾಲ್ಯತೆ ಹೊಂದಿದ್ದರು. ಅವರು ಇಂದು ಇಲ್ಲ ಎನ್ನುವುದನ್ನು ನಂಬುವುದಕ್ಕಾಗುತ್ತಿಲ್ಲ. ಬಸವಾದಿ ಶರಣರು ಅವರಿಗೆ ಚಿರಶಾಂತಿಯನ್ನು ಮತ್ತು ಅವರ ಕುಟುಂಬವರ್ಗದವರಿಗೆ ಅಗಲುವಿಕೆಯ ನೋವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ದಯಪಾಲಿಸಲಿ ಎಂದು ಶ್ರೀಗಳು ಪ್ರಾರ್ಥಿಸಿದ್ದಾರೆ.

## ಐಎಎಸ್ ಅಧಿಕಾರಿ ಬೀಳಗಿ ನಿಧನಕ್ಕೆ ಶ್ರದ್ಧಾಂಜಲಿ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಹಿರಿಯ ಐಎಎಸ್ ಅಧಿಕಾರಿ ಮಹಾಂತೇಶ ಬೀಳಗಿ ನಿಧನಕ್ಕೆ ಇಲ್ಲಿನ ಕಾಲಕಾಲೇಶ್ವರ ವೃತ್ತದಲ್ಲಿ ವೀರಶೈವ ಲಿಂಗಾಯತ ಸಮಾಜದಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಇದಕ್ಕೂ ಮುನ್ನ ಗಜೇಂದ್ರಗಡ–ಉಣಚಗೇರಿ ವೀರಶೈವ ಲಿಂಗಾಯತ ಸಮಾಜದ ತಾಲೂಕಾಧ್ಯಕ್ಷ ಸಿದ್ದಪ್ಪ ಬಂಡಿ ಮಾತನಾಡಿ, ಕರ್ನಾಟಕ ರಾಜ್ಯ ಖನಿಜ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿದ್ದ ಹಿರಿಯ ಐಎಎಸ್ ಅಧಿಕಾರಿ ಮಹಾಂತೇಶ ಬೀಳಗಿ ಅವರು ರಸ್ತೆ ಅಪಘಾತದಲ್ಲಿ ನಿಧನರಾಗಿದ್ದು ತೀವ್ರ ನೋವುಂಟುಮಾಡಿದೆ. ದಕ್ಷ ಹಾಗೂ ಪ್ರಾಮಾಣಿಕ ಅಧಿಕಾರಿಯಾಗಿ ಸೇವೆ ಸಲ್ಲಿಸಿದ್ದ ಮಹಾಂತೇಶ ಬೀಳಗಿ ಅವರು ಕರ್ತವ್ಯ ನಿರ್ವಹಿಸಿದ ಎಲ್ಲೆಡೆ ದಕ್ಷತೆಯ ಹೆಜ್ಜೆ ಗುರುತುಗಳನ್ನು ಉಳಿಸಿ ಹೋಗಿದ್ದಾರೆ.

ಅವರ ಅಗಲಿಕೆ ತುಂಬಲಾರದ ನಷ್ಟವನ್ನು ಮಾಡಿದೆ. ಅವರ ಆತ್ಮಕ್ಕೆ ಶಾಂತಿ ದೊರಕಲೆಂದು ಪ್ರಾರ್ಥಿಸುತ್ತೇವೆ ಎಂದರು.

ಈ ವೇಳೆ ಶರಣಪ್ಪ ರೇವಡಿ, ಬಸವರಾಜ ಬೇಲೇರಿ, ನಾಗಣ್ಣ ಲಕ್ಕಲಕಟ್ಟಿ, ಬಿ.ಎಸ್. ಬಸನಗೌಡರ, ಸಾಗರ ವಾಲಿ, ಮುತ್ತಣ್ಣ ಗುಗ್ಗರಿ, ಬಸವರಾಜ ಹೂಗಾರ, ಮಹೇಶ ಪಲ್ಲೇದ, ಮಲ್ಲಿಕಾರ್ಜುನ ಕೊಟಗಿ, ಮಲ್ಲಿಕಾರ್ಜುನ ಹಡಪದ, ಕಳಕಯ್ಯ ಸಾಲಿಮಠ ಸೇರಿ ಇತರರು ಇದ್ದರು.

# ಕರ್ಮದ ಪ್ರತಿಫಲ ಅನುಭವಿಸಲೇಬೇಕು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತದಲ್ಲಿ ಹಿಂದೆ ಗುರುಕುಲ ಶಿಕ್ಷಣ ಪದ್ಧತಿಯಿತ್ತು. ಅಲ್ಲಿ ವಿದ್ಯಾರ್ಥಿಗಳಿಗೆ ಚಿಕ್ಕ ವಯಸ್ಸಿನಿಂದಲೇ ಷಡ್ರಿಪುಗಳ ನಿರ್ಮೂಲನೆ ಬಗ್ಗೆ ಹೇಳಿಕೊಡಲಾಗುತ್ತಿತ್ತು. ಹಿಂದೆ ಅವಿಭಾಜ್ಯ ಕುಟುಂಬಗಳು ಇರುತ್ತಿದ್ದವು. ಎಲ್ಲರೂ ಪರಸ್ಪರ ಸ್ನೇಹ, ಸಹಬಾಳ್ವೆಯಿಂದ ಇರುತ್ತಿದ್ದರು. ಆದರೆ ಇಂದಿನ ಕಾಲದ ಸ್ಥಿತಿ ಇದಕ್ಕೆ ವಿರುದ್ಧವಾಗಿ ನಡೆಯುತ್ತಿದೆ ಎಂದು ಧರ್ಮಪ್ರಚಾರಕ ರಮಾನಂದ ಗೌಡ ಹೇಳಿದರು.



ಅವರು ಪಟ್ಟಣದಲ್ಲಿ ಮಂಗಳವಾರ ಹಿಂದೂ ಜನಜಾಗೃತಿ ಸಮಿತಿಯಿಂದ ಆಯೋಜಿಸಲಾಗಿದ್ದ ಸಂತರ ವಿಶೇಷ ಸತ್ಸಂಗದಲ್ಲಿ ಮಾರ್ಗದರ್ಶನ ಮಾಡಿ ಮಾತನಾಡಿದರು. ವಿದ್ಯಾವಂತರೇ ಭ್ರಷ್ಟಾಚಾರ ದಂತಹ ಅಧರ್ಮದ ಕೆಲಸಗಳನ್ನು ಮಾಡುತ್ತಿದ್ದಾರೆ. ನಮ್ಮ ಶ್ರೇಷ್ಠ ಧರ್ಮದ ಬಗ್ಗೆ ಶಿಕ್ಷಣ, ಮಾಹಿತಿ ಇಲ್ಲದವರು ಮತಾಂತರಗೊಳ್ಳುತ್ತಿದ್ದಾರೆ. ಜನರು ಧರ್ಮದ ಆಚರಣೆ ಮಾಡುತ್ತಿಲ್ಲ, ನಾವು ಏನು ಕರ್ಮ ಮಾಡುತ್ತೇವೆಯೋ ಅದರ ಪ್ರತಿಫಲ ಅನುಭವಿಸಲೇಬೇಕಾಗುತ್ತದೆ. ಇದಕ್ಕಾಗಿ ನಾವೆಲ್ಲರೂ ಧರ್ಮಾಚರಣೆ ಮಾಡುವುದು ಅತ್ಯವಶ್ಯಕವಾಗಿದೆ ಎಂದು ನುಡಿದರು.

ಪ್ರತಿದಿನ ಆಧ್ಯಾತ್ಮಿಕ ಉನ್ನತಿಗಾಗಿ ನಮ್ಮ ಕುಲದೇವರ ನಾಮಜಪ ಮಾಡಬೇಕು. ನಾಮಜಪ ಮಾಡಲು ಯಾವುದೇ ರೀತಿಯ ಸೂತಕ ಇರುವುದಿಲ್ಲ. ಸ್ವಭಾವದೋಷ, ಅಹಂ ನಿರ್ಮೂಲನೆ ಪ್ರಕ್ರಿಯೆಯನ್ನು ಮಾಡಬೇಕು. ಇಂತಹ ಧರ್ಮಶಿಕ್ಷಣದ ಮಾಹಿತಿಗಳನ್ನು ನಿರಂತರವಾಗಿ ಪಡೆಯಲು ಸಮಿತಿಯ ವತಿಯಿಂದ ವಾರದಲ್ಲಿ ಒಂದು ದಿನ ಒಂದು ಗಂಟೆ ಆಯೋಜಿಸಲಾಗುವ ಉಚಿತ ಧರ್ಮಶಿಕ್ಷಣ ವರ್ಗಗಳಲ್ಲಿ ಪಾಲ್ಗೊಳ್ಳಬಹುದು. ಪ್ರತಿದಿನ ಧರ್ಮಾಚರಣೆ ಹಾಗೂ ಆಧ್ಯಾತ್ಮಿಕ ಸಾಧನೆ ಮಾಡಿ ನಮ್ಮ ಜೀವನವನ್ನು ಆನಂದಮಯವನ್ನಾಗಿಸೋಣ ಎಂದು ಕರೆ ನೀಡಿದರು.

### ನ. 29ರಿಂದ ಪ್ರತಿಭಟನೆ ಉಗ್ರ ಸ್ವರೂಪ ಪಡೆದುಕೊಳ್ಳಲಿದೆ । ಸರ್ಕಾರಕ್ಕೆ ಅನ್ನದಾತರ ಎಚ್ಚರಿಕೆ

# ಮುಂದಿನ ಅನಾಹುತಕ್ಕೆ ಸರ್ಕಾರವೇ ಹೊಣೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗೋವಿನಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರ ಆರಂಭಕ್ಕಾಗಿ ಲಕ್ಷ್ಮೇಶ್ವರದಲ್ಲಿ ಸಮಗ್ರ ರೈತ ಸಂಘಟನೆಗಳ ಒಕ್ಕೂಟದಿಂದ ಕಳೆದ 13 ದಿನಗಳಿಂದ ನಡೆಸುತ್ತಿರುವ ಅಹೋರಾತ್ರಿ ಧರಣಿ ಸತ್ಯಾಗ್ರಹ ಇದುವರೆಗೂ ಶಾಂತ ರೀತಿಯಿಂದ ನಡೆದಿದೆ. ನ. 29ರಿಂದ ಉಗ್ರ ಸ್ವರೂಪಪಡೆದುಕೊಳ್ಳಲಿದ್ದು, ಮುಂದಾಗಬಹುದಾದ ಅನಾಹುತಕ್ಕೆ ಸರ್ಕಾರ ಉತ್ತರಿಸಬೇಕಾಗುತ್ತದೆ ಎಂದು ಹೋರಾಟ ವೇದಿಕೆಯ ಮುಖಂಡರಾದ ಮಂಜುನಾಥ ಮಾಗಡಿ, ರವಿಕಾಂತ ಅಂಗಡಿ ಎಚ್ಚರಿಕೆ ನೀಡಿದರು.

ಅವರು ಗುರುವಾರ ಧರಣಿ ಸತ್ಯಾಗ್ರಹ ವೇದಿಕೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಗೋವಿನ ಜೋಳ ಬೆಳೆದ ತಪ್ಪಿಗಾಗಿ ನಮ್ಮನ್ನು ನಾವು ದಂಡಿಸಿಕೊಂಡಿದ್ದೇವೆ. ಸರ್ಕಾರ ಭರವಸೆ ನೀಡಿದರೂ ರೈತರು ಹೋರಾಟ ಕೈ ಬಿಡಲಿಲ್ಲ. ಆದ್ರಳ್ಳಿ ಗವಿಮಠದ ಶ್ರೀ ಕುಮಾರ ಮಹಾರಾಜರು 5 ದಿನಗಳಿಂದ ಸಲ್ಲೇಖನ ವ್ರತ ಕೈಗೊಂಡು ಆಸ್ಪತ್ರೆ ಸೇರಿದ ಸುದ್ದಿ ರಾಜ್ಯ ಸರ್ಕಾರದ ಕಣ್ಣು ತೆರೆಸಿತು. ಮುಖ್ಯಮಂತ್ರಿಗಳು 8 ದಿನಗಳ ಹಿಂದೆಯೇ 10 ಲಕ್ಷ ಮೆಟ್ರಿಕ್ ಟನ್ ಮೆಕ್ಕೆಜೋಳವನ್ನು ಬೆಂಬಲ ಬೆಲೆಯಡಿ ಖರೀದಿಸುವ ನಿರ್ಧಾರ ಘೋಷಿಸಿದರು.

ಆದರೆ ಲಕ್ಷ್ಮೇಶ್ವರದಲ್ಲಿ ಖರೀದಿ ಕೇಂದ್ರ ಕಾರ್ಯಾರಂಭಗೊಳ್ಳುವವರೆಗೂ ಹೋರಾಟ ಮುಂದುವರೆಸುವ ಮೂಲಕ ದಿನೇ ದಿನೇ ಸರ್ಕಾರ, ಅಧಿಕಾರಿಗಳನ್ನು ಎಚ್ಚರಿಸುವ ಕಾರ್ಯ ಮಾಡುತ್ತಾ ಬಂದಿದ್ದೇವೆ. ನ. 28ರ ಒಳಗೆ ಖರೀದಿ ಕೇಂದ್ರಗಳು ಪ್ರಾರಂಭಗೊಳ್ಳದಿದ್ದರೆ ನ.29ರಿಂದ ಸರ್ಕಾರದ ಅಣುಕು ಶವಯಾತ್ರೆ, ಸರ್ಕಾರಿ ಕಚೇರಿಗಳಿಗೆ ಬೀಗ, ಬೆಳೆಯನ್ನು ರಾಜ್ಯ ರಸ್ತೆಗೆ ಹಾಕುವುದು, ಮಠಾಧೀಶರೊಂದಿಗೆ ನೂರಾರು ರೈತರ ಕಠಿಣ ಉಪವಾಸ ಸತ್ಯಾಗ್ರಹದಂತಹ ಉಗ್ರ ಸ್ವರೂಪದ ಹೋರಾಟಕ್ಕೆ ಮುಂದಾಗುತ್ತೇವೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಪಕ್ಷಾತೀತ ರೈತ ಹೋರಾಟದ ಸಂಘದ ಅಧ್ಯಕ್ಷ ಮಹೇಶ ಹೊಗೆಸೊಪ್ಪಿನ, ಕರವೇ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಶರಣು ಗೋಡಿ, ನಾಗರಾಜ ಚಿಂಚಲಿ ಮಾತನಾಡಿದರು.




> 8/10 ದಿನ ಕಳೆದರೂ ಖರೀದಿ ಕೇಂದ್ರ ಪ್ರಾರಂಭಗೊಳ್ಳದ್ದರಿಂದ ನ. 29ರಿಂದ ನಾವು ಮತ್ತೆ ಉಪವಾಸ ಸತ್ಯಾಗ್ರಹಕ್ಕೆ ಮುಂದಾಗುತ್ತೇವೆ. ಸತ್ತರೂ ಸರಿ, ಕುಳಿತ ಜಾಗದಿಂದ ಕದಲುವುದಿಲ್ಲ. ಅನ್ನ, ನೀರು, ಔಷಧೋಪಚಾರ ತ್ಯಜಿಸುತ್ತೇವೆ. ನಮ್ಮೊಂದಿಗೆ ಈ ಬಾರಿ ಅನೇಕ ರೈತರು ಉಪವಾಸ ಸತ್ಯಾಗ್ರಹಕ್ಕೆ ಮುಂದಾಗಿದ್ದಾರೆ. ರೈತರ ನ್ಯಾಯಯುತ ಹೋರಾಟಕ್ಕೆ ಬೆಲೆ ಸಿಗದಿದ್ದರೆ ಪ್ರಾಣ ತ್ಯಾಗಕ್ಕೂ ಸಿದ್ಧ. ಮುಂದಾಗುವ ಅನಾಹುತಕ್ಕೆ ಸರ್ಕಾರ ತಕ್ಕ ಉತ್ತರ ಕೊಡಬೇಕಾಗುತ್ತದೆ.
>
> **– ಶ್ರೀ ಕುಮಾರ ಮಹಾರಾಜರು.**
> ಆದ್ರಳ್ಳಿ, ಗವಿಮಠ.

ರೈತರಾದ ಚಂಬಣ್ಣ ಬಾಳಿಕಾಯಿ, ಬಸವರಾಜ ಬೆಂಡಿಗೇರಿ, ಪೂರ್ಣಾಜಿ ಖರಾಟೆ, ಶಿವಾನಂದ ಲಿಂಗಶೆಟ್ಟಿ, ನೀಲಪ್ಪ ಶರಸೂರಿ, ಚನ್ನಪ್ಪ ಷಣ್ಮುಕಿ, ಕಾಶಪ್ಪ ಮುಳಗುಂದ, ಹನಮಂತಪ್ಪ ಮಾದರ, ದೇವಪ್ಪ ಮಲ್ಲೂರ, ಸುರೇಶ ಹಟ್ಟಿ, ಬಸವರಾಜ ಹಿರೇಮನಿ, ಪ್ರಕಾಶ ಕೊಂಚಿಗೇರಿಮಠ, ಟಾಕಪ್ಪ ಸಾತಪುತೆ, ನಿಂಗಪ್ಪ ಗದ್ದಿ, ಮಲ್ಲೇಶಪ್ಪ ವಡ್ಡರ, ಶಿವನಗೌಡ್ರ ಅಡರಕಟ್ಟಿ, ರಾಜು ಗುಡಗೇರಿ ಪರಶುರಾಮ ಲಕ್ಕಣ್ಣವರ, ಮುದಕಪ್ಪ ಗೋಡಿ, ದಾದಾಪೀರ ಮುಚ್ಚಾಲೆ, ಎಂ.ಎಂ. ಗದಗ, ತಿಮ್ಮಪ್ಪ ಸಿದ್ದಣ್ಣವರ, ಎಂ.ಎಚ್. ಬಟ್ಟೂರ, ರಾಜು ಬೆಲ್ಲದ ಮುಂತಾದವರಿದ್ದರು.

## 'ಕಲಾವಿಕಾಸ ಕನ್ನಡ ಸಿರಿ' ಪ್ರಶಸ್ತಿಗೆ ಆಯ್ಕೆ







**■ವಿಜಯಸಾಕ್ಷಿ ಸುದ್ದಿ, ಗದಗ**

ಕಲಾ ವಿಕಾಸ ಪರಿಷತ್ತಿನ 'ಕಲಾ ವಿಕಾಸ ಕನ್ನಡ ಸಿರಿ' ಜೀವಮಾನದ ಶ್ರೇಷ್ಠ ಸಾಧನೆಯ ಪ್ರಶಸ್ತಿಗೆ ನಗರದ ನಿವೃತ್ತ ಉಪನ್ಯಾಸಕರು, ಸಾಹಿತಿಗಳು, ಸಂಸ್ಕೃತಿ ಚಿಂತಕರಾದ ಪ್ರೊ. ಅನ್ನದಾನಿ ಹಿರೇಮಠ, ಶಿಕ್ಷಣ ತಜ್ಞರು, ಚಿಕ್ಕಟ್ಟಿ ಸಮೂಹ ಶಿಕ್ಷಣ ಸಂಸ್ಥೆಗಳ ಸಂಸ್ಥಾಪಕರು ಹಾಗೂ ಕಲಾಪೋಷಕರಾದ ಪ್ರೊ. ಎಸ್. ವಾಯ್. ಚಿಕ್ಕಟ್ಟಿ ಹಾಗೂ ಸಾಹಿತಿ ಮತ್ತು ಪತ್ರಕರ್ತರು, ವಿಭೂತಿ ಮಾಸಪತ್ರಿಕೆಯ ಸಂಪಾದಕರಾದ ಅಂದಾನೆಪ್ಪ ವಿಭೂತಿಯವರನ್ನು ಆಯ್ಕೆ ಮಾಡಲಾಗಿದೆ. ಈ ಪ್ರಶಸ್ತಿ ಪ್ರದಾನ ಸಮಾರಂಭವು ಡಿ. 14ರಂದು ಬೆಳಿಗ್ಗೆ 10 ಗಂಟೆಗೆ ಹಾತಲಗೇರಿ ರಸ್ತೆಯಲ್ಲಿರುವ ಕಾಶಿ ವಿಶ್ವನಾಥ ದೇವಸ್ಥಾನದ ಆವರಣದ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ನಡೆಯಲಿದೆ ಎಂದು ಪರಿಷತ್ತಿನ ಸಂಸ್ಥಾಪಕ ಸಿ.ಕೆ. ಹೆಚ್. ಶಾಸ್ತ್ರೀ (ಕಡಣಿ) ಹಾಗೂ ಕಲಾ ವಿಕಾಸ ಪರಿಷತ್ ರಜತ ಮಹೋತ್ಸವ ಸ್ವಾಗತ ಸಮಿತಿ ಅಧ್ಯಕ್ಷ ವಿ.ಕೆ. ಗುರುಮಠ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಪೂಜಿ ಶಾಲೆಯಲ್ಲಿ ಸಂವಿಧಾನ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಭಾರತ ದೇಶವು ಸಂವಿಧಾನವನ್ನು ಅಳವಡಿಸಿಕೊಂಡು ಇಂದಿಗೆ 75 ವರ್ಷಗಳಾದವು. ಪ್ರತಿವರ್ಷ ಈ ದಿನವನ್ನು ರಾಷ್ಟ್ರೀಯ ಸಂವಿಧಾನ ದಿನವನ್ನಾಗಿ ಆಚರಿಸಲಾಗುತ್ತದೆ ಎಂದು ಹಿರಿಯ ಶಿಕ್ಷಕ ಬಸವರಾಜ ಗರ್ಜಪ್ಪನವರ ಹೇಳಿದರು.

ಇಲ್ಲಿಯ ಲಕ್ಕುಂಡಿ ಗ್ರಾಮೀಣ ವಿದ್ಯಾವರ್ಧಕ ಸಂಸ್ಥೆಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡ ರಾಷ್ಟ್ರೀಯ ಸಂವಿಧಾನ ದಿನಾಚರಣೆಯನ್ನುದ್ದೇಶಿಸಿ ಮಾತನಾಡಿದ ಅವರು, 2015ರವರೆಗೆ ಈ ದಿನವನ್ನು ರಾಷ್ಟ್ರೀಯ ಕಾನೂನು ದಿನ ಎಂದು ಆಚರಿಸಲಾಗುತ್ತಿತ್ತು. ಆದರೆ ಭಾರತ ಸರಕಾರವು 2015ರಲ್ಲಿ ಗೆಜೆಟ್ ಅಧಿಸೂಚನೆಯ ಮೂಲಕ ನವೆಂಬರ್ 26ನ್ನು ಸಂವಿಧಾನ ದಿನವೆಂದು ಘೋಷಿಸಿತು. ಕಾನೂನು ದಿನ ಮತ್ತು ಸಂವಿಧಾನ ದಿನ ಈ ಎರಡರ ಉದ್ದೇಶವೂ ಒಂದೇ ಆಗಿದೆ ಎಂದರು.

ಶಿಕ್ಷಕಿ ರಫಿಯಾ ದಂಡಿನ ಅವರು ಪ್ರಾರ್ಥನಾ ಸಮಯದಲ್ಲಿ ಮಕ್ಕಳಿಗೆ ಸಂವಿಧಾನ ಪ್ರಸ್ತಾವನೆಯ ವಾಚನ ಮಾಡಿಸಿದರು. ಮಕ್ಕಳಿಗೆ ಸಂವಿಧಾನ ಕುರಿತಾದ ಸ್ಪರ್ಧೆಗಳು ನಡೆದವು. ಈ ಸಂದರ್ಭದಲ್ಲಿ ಮುಖ್ಯ ಶಿಕ್ಷಕಿ ಆರ್.ಬಿ. ಬರದ್ವಾಡ, ಅರ್ಜುನ ಚಲವಾದಿ, ಪಿ.ಬಿ. ಬರದ್ವಾಡ, ಎ.ಎಂ. ದಂಡಿನ, ಲಕ್ಷ್ಮೀ ಗರ್ಜಪ್ಪನವರ, ಅಂಬುಜಾ ಕುಲಕರ್ಣಿ ಇದ್ದರು. ಗ್ರಾಮ ಪಂಚಾಯಿತಿ, ಬಾಲಕಿಯರ ಸರಕಾರಿ ಪ್ರೌಢಶಾಲೆ, ಸರಕಾರಿ ಮಾದರಿ ದ್ವಿಭಾಷಾ ಪ್ರಾಥಮಿಕ ಶಾಲೆ, ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆ, ಕೆ.ಜಿ.ಎಸ್. ಸರಕಾರಿ ಪ್ರಾಥಮಿಕ ಉರ್ದು ಶಾಲೆ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ಸರಕಾರಿ ಹಿರಿಯ ಕನ್ನಡ ಪ್ರಾಥಮಿಕ ಶಾಲೆ ಮಾರುತಿ ನಗರ, ಬಿ.ಎಚ್. ಪಾಟೀಲ ಪ್ರೌಢಶಾಲೆಯಲ್ಲಿ ಸಂವಿಧಾನ ದಿನವನ್ನು ಆಚರಿಸಲಾಯಿತು.




## ಬೀಚಿ ಬಳಗದ ನೂತನ ಪದಾಧಿಕಾರಿಗಳ ಆಯ್ಕೆ









**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನರೇಗಲ್ಲನ ಬೀಚಿ ಬಳಗಕ್ಕೆ 2025-26ನೇ ಸಾಲಿಗಾಗಿ ನೂತನ ಪದಾಧಿಕಾರಿಗಳ ಆಯ್ಕೆ ಮಾಡಲಾಗಿದೆ ಎಂದು ಬಳಗದ ಅಧ್ಯಕ್ಷ ಕೆ.ಎಸ್. ಕಳಕೊಣ್ಣವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಧ್ಯಕ್ಷರಾಗಿ ಶಿವಯೋಗಿ ಜಕ್ಕಲಿ, ಸಂಚಾಲಕರಾಗಿ ಜೆ.ಎ. ಪಾಟೀಲ, ಕಾರ್ಯದರ್ಶಿಯಾಗಿ ಭಾರತಿ ಶಿರ್ಸಿ, ಉಪಾಧ್ಯಕ್ಷರಾಗಿ ಮಹಾದೇವಪ್ಪ ಬೇವಿನಕಟ್ಟಿ, ನಿರ್ಮಲಾ ಹಿರೇಮಠ, ಖಜಾಂಚಿಯಾಗಿ ಬಿ.ಬಿ. ಕುರಿ, ಸಹ ಕಾರ್ಯದರ್ಶಿಯಾಗಿ ಸಿ.ಕೆ. ಕೇಸರಿ, ಐ.ಕೆ. ಬೆಟಗೇರಿ, ಪತ್ರಿಕಾ ಪ್ರತಿನಿಧಿಯಾಗಿ ಆದರ್ಶ ಕುಲಕರ್ಣಿ ಇವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಭಾಗ ಮಟ್ಟಕ್ಕೆ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಶಾಲಾ ಶಿಕ್ಷಣ (ಪದವಿಪೂರ್ವ) ಇಲಾಖೆ ಹಾಗೂ ಮುಂಡರಗಿಯ ಶ್ರೀ ಅನ್ನದಾನೇಶ್ವರ ಪದವಿ ಪೂರ್ವ ಕಾಲೇಜು ಇವರ ಸಂಯುಕ್ತ ಆಶ್ರಯದಲ್ಲಿ ಜರುಗಿದ 2025-26ನೇ ಸಾಲಿನ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಸ್ವಾಮಿ ವಿವೇಕಾನಂದ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದ ವಿದ್ಯಾರ್ಥಿ ಬಸವರಾಜ ಯರನಾಳ ಭಾವಗೀತೆ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಗಳಿಸಿ, ವಿಭಾಗ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ.



ಸಾಧನೆಗೈದ ವಿದ್ಯಾರ್ಥಿಗೆ ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರು, ಸರ್ವ ಸದಸ್ಯರು, ಪ್ರಾಚಾರ್ಯರು, ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಶುಭ ಹಾರೈಸಿದ್ದಾರೆ.

## ಪರಿಹಾರದ ಮೊತ್ತವನ್ನು ರೈತರ ಸಾಲದ ಖಾತೆಗೆ ಹೊಂದಾಣಿಕೆ ಮಾಡದಿರಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಜಿಲ್ಲೆಯಲ್ಲಿನ ರೈತರ ಬ್ಯಾಂಕ್ ಖಾತೆಗಳಿಗೆ ಬರ, ಅತಿವೃಷ್ಟಿ, ಪ್ರವಾಹ ಹಾಗೂ ಇತರ ನೈಸರ್ಗಿಕ ವಿಕೋಪಗಳ ಪರಿಹಾರದ ಮೊತ್ತವು ಸರ್ಕಾರದಿಂದ ನೇರವಾಗಿ ಡಿ.ಬಿ.ಟಿ ಮೂಲಕ ಸಂದಾಯವಾಗುತ್ತದೆ. ಸದರ ಮೊತ್ತವನ್ನು ಯಾವುದೇ ಕಾರಣಕ್ಕೂ ಸಾಲದ ಖಾತೆಗೆ ಹೊಂದಾಣಿಕೆ ಮಾಡಿಕೊಳ್ಳಬಾರದು ಎಂದು ಎಲ್ಲ ಬ್ಯಾಂಕ್‌ಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ನಿರ್ದೇಶಿಸಿದ್ದಾರೆ.



ಈ ಕುರಿತು ಜಿಲ್ಲೆಯ ಎಲ್ಲ ಬ್ಯಾಂಕುಗಳು ಮುಖ್ಯಸ್ಥರಿಗೆ, ವ್ಯವಸ್ಥಾಪಕರಿಗೆ ಮತ್ತು ಶಾಖಾ ವ್ಯವಸ್ಥಾಪಕರಿಗೆ ಸೂಚನೆ ನೀಡಿ, ರೈತರಿಗೆ ತೊಂದರೆ ಆಗದಂತೆ ಮತ್ತು ಪರಿಹಾರ ಮೊತ್ತವನ್ನು ಸಾಲದ ಖಾತೆಗೆ ಹೊಂದಾಣಿಕೆ ಮಾಡಿಕೊಳ್ಳದಂತೆ ಸೂಕ್ತ ಕ್ರಮ ಕೈಗೊಳ್ಳಲು ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದ್ದಾರೆ.

## ಜ. ಶಿವಾನಂದ ಶಿವಾಚಾರ್ಯರ ಭಾವಚಿತ್ರ ವಿತರಣೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಬಾಳೆಹೊನ್ನೂರು ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ 118ನೇ ಪೀಠಾಧೀಶರಾಗಿದ್ದ ಶ್ರೀಮದ್ ರಂಭಾಪುರಿ ಶಿವಾನಂದ ಜಗದ್ಗುರುಗಳ ಪೀಠಾರೋಹಣದ ನಿಮಿತ್ತ ಗುರುವಾರ ಪೀಠದ ಭಕ್ತ, ಶಿಗ್ಲಿ ಗ್ರಾಮದ ನಿವಾಸಿ ವೀರಣ್ಣ ಪವಾಡದ ಅವರು ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಲಿಂ.ವೀರಗಂಗಾಧರ ಜಗದ್ಗುರುಗಳ ಗದ್ದುಗೆ ಪೂಜೆ, ಜಗದ್ಗುರು ಶಿವಾನಂದ ಶಿವಾಚಾರ್ಯರ ಭಾವಚಿತ್ರಗಳಿಗೆ ವಿಶೇಷ ಪೂಜೆ ಸಲ್ಲಿಸಿ ಭಕ್ತರಿಗೆ ನೂರಾರು ಭಾವಚಿತ್ರಗಳನ್ನು ವಿತರಿಸಿದರು.

ನಂತರ ಮಾತನಾಡಿದ ಅವರು, ರಂಭಾಪುರಿ ಪೀಠ ವೀರಶೈವ ಧರ್ಮದ ಬೆಳವಣಿಗೆಗೆ ಮಹತ್ತರ ಕೊಡುಗೆ ನೀಡಿದೆ. ಭಕ್ತರಲ್ಲಿ ಧರ್ಮ ಜಾಗೃತಿ ಮೂಡಿಸುವ ಮೂಲಕ ಇಡೀ ವಿಶ್ವಕ್ಕೆ ಶಾಂತಿಯ ಸಂದೇಶ ಸಾರಿದೆ. ಪೀಠದ 118ನೇ ಜಗದ್ಗುರುಗಳಾಗಿದ್ದ ಶಿವಾನಂದ ಶಿವಾಚಾರ್ಯ ಸ್ವಾಮೀಜಿ ತಪೋನಿಷ್ಠರಾಗಿ ವೀರಶೈವ ಧರ್ಮದ ಉದ್ಧಾರ ಮಾಡಿದ ಕೀರ್ತಿಗೆ ಭಾಜನರಾಗಿದ್ದಾರೆ. ಅವರು ಸಾರಿದ ಧರ್ಮಜ್ಯೋತಿಯ ಸಂದೇಶವನ್ನು ನಾವು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡು ನಡೆದರೆ ಸುಖ, ಶಾಂತಿ, ಸಮಾಧಾನ ಲಭಿಸುತ್ತದೆ ಎಂದು ತಿಳಿಸಿದರು.

ಈ ವೇಳೆ ಗುರುಲಿಂಗಯ್ಯಸ್ವಾಮಿ ಹಿರೇಮಠ, ಪ್ರಧಾನ ಅರ್ಚಕ ವೀರಯ್ಯಸ್ವಾಮಿ ನೇಗಳೂರಮಠ, ದಾಸೋಹದ ಕಾರ್ಯದರ್ಶಿ ಕೊಟ್ರೇಶ ಹಿರೇಮಠ ದಂಪತಿ ಇದ್ದರು.

## ತೆಲಂಗಾಣ ಮಾಜಿ ಸರಪಂಚ್ ಭೀಕರ ಹತ್ಯೆ ಪ್ರಕರಣ; ಸುಪಾರಿ ಗ್ಯಾಂಗ್ ಬಂಧನ

**■ವಿಜಯಸಾಕ್ಷಿ ಸುದ್ದಿ, ತೆಲಂಗಾಣ**

ತೆಲಂಗಾಣ ರಾಜ್ಯದ ಗದ್ವಾಲ ಜಿಲ್ಲೆಯ ನಂದಿನ್ನಿ ಗ್ರಾಮದ ಮಾಜಿ ಸರಪಂಚ ಚಿನ್ನ ಭೀಮರಾಯ ಎಂಬುವವರನ್ನು ಕಳೆದ ಶುಕ್ರವಾರ ಮಧ್ಯಾಹ್ನ ಜಾಂಪಲ್ಲಿ ಗ್ರಾಮದ ಹತ್ತಿರ ದ್ವಿಚಕ್ರ ವಾಹನಕ್ಕೆ ಕಾರಿನಿಂದ ಡಿಕ್ಕಿ ಹೊಡೆದು ಕೊಲೆ ಮಾಡಲಾಗಿತ್ತು. ಇಂದು, ಕೊಲೆ ಮಾಡಿದ ತಂಡವನ್ನು ಪೊಲೀಸರು ಬಂಧಿಸಿದ್ದಾರೆ.

ಅಪಘಾತ ಸ್ಥಳದಲ್ಲಿದ್ದ ಬುಲೆರೋ ವಾಹನ ಚಾಲಕನನ್ನು ಹಿಡಿದು ಪೊಲೀಸರು ವಿಚಾರಣೆ ನಡೆಸಿದಾಗ ಈ ಸುಪಾರಿ ಗ್ಯಾಂಗ್ ಕೊಲೆ ಮಾಡಿರುವುದಾಗಿ ತಿಳಿದು ಬಂದಿದೆ. ಗ್ಯಾಂಗ್ ನ್ನು ವಶಪಡಿಸಿಕೊಂಡು ವಿಚಾರಣೆ ನಡೆಸಿ ತನಿಖೆ ಮಾಡಿದಾಗ, ನಂದಿನ್ನಿ ಗ್ರಾಮದ ರೈಸ್ ಮಿಲ್ ಮಾಲೀಕರಾದ ಮಿಲ್ ಈರಣ್ಣ ಈ ಹತ್ಯೆ ಮಾಡಿಸಿದ್ದಾರೆ ಎನ್ನುವುದು ತಿಳಿದುಬಂದಿದೆ.

ಮಿಲ್ ಈರಣ್ಣ, ರಾಯಲಸೀಮಾ ಸುಪಾರಿ ಗ್ಯಾಂಗ್ ಜೊತೆ 15 ಲಕ್ಷ ರೂಪಾಯಿಗೆ ಒಪ್ಪಂದ ಮಾಡಿಕೊಂಡು ಕೊಲೆ ಮಾಡಲು ಸಂಚು ರೂಪಿಸಿದ್ದರು. ಸುಪಾರಿ ಗ್ಯಾಂಗ್ ಒಂದು ವಾರದಿಂದ ಭೀಮರಾಯನ ಬೆನ್ನುಹತ್ತು, ಆತ ಒಬ್ಬಂಟಿಯಾಗಿ ಇರುವ ಸಂದರ್ಭ ನೋಡಿ ಅಪಘಾತ ಮಾಡಿಸಿ ಕೊಲೆ ಮಾಡಿದ್ದಾರೆ.

## ಕಾನೂನು ಅರಿವು-ನೆರವು ಕಾರ್ಯಕ್ರಮ



**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಜಿಲ್ಲಾ ನ್ಯಾಯಾಂಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಅಭಿಯೋಜನೆ ಇಲಾಖೆ, ಧಾರವಾಡ ವಕೀಲರ ಸಂಘ ಇವರ ಸಹಯೋಗದೊಂದಿಗೆ ಧಾರವಾಡ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಸಂವಿಧಾನ ದಿನಾಚರಣೆಯ ಅಂಗವಾಗಿ ಕಾನೂನು ಅರಿವು-ನೆರವು ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.


ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ.ಎಸ್ .ಭಾರತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಭಾರತದ ಸಂವಿಧಾನವು ಜಗತ್ತಿನ ಅತೀ ದೊಡ್ಡ ಲಿಖಿತ ಸಂವಿಧಾನವಾಗಿದೆ. ಸಂವಿಧಾನದ ಸಂಪೂರ್ಣ ಅರ್ಥ ಅದರ ಪೀಠಿಕೆಯಲ್ಲಿ ಅಡಗಿದೆ. ಆದ್ದರಿಂದ, ಭಾರತದ ಪ್ರತಿಯೊಬ್ಬ ಪ್ರಜೆಯು ಸಂವಿಧಾನದ ಪೀಠಿಕೆಯನ್ನು ಅರಿತಿರಬೇಕು. ಸಂವಿಧಾನದಲ್ಲಿರುವ ಮೂಲಭೂತ ಹಕ್ಕುಗಳೊಂದಿಗೆ ಕರ್ತವ್ಯವನ್ನು ಪಾಲಿಸುವ ಮನೋಭಾವನೆ ಎಲ್ಲರಲ್ಲಿಯೂ ಮೂಡಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಖಾಯಂ ಜನತಾ ನ್ಯಾಯಾಲಯ ಅಧ್ಯಕ್ಷರು ಹಾಗೂ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸುವರ್ಣಾ ಕೆ.ಮಿರ್ಜಿ ವಹಿಸಿದ್ದರು. ಅತಿಥಿಗಳಾಗಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ನಾಗರಾಜಪ್ಪ ಎ.ಕೆ, ರಾಜಕುಮಾರ ಸಿ, ಜರೀನಾ, ಪೂರ್ಣಿಮಾ ಭಂಡಾರಕರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ, ಹಿರಿಯ ಸಿವಿಲ್ ನ್ಯಾಯಾಧೀಶ ಪರಶುರಾಮ ಎಫ್. ದೊಡ್ಡಮನಿ, ಧಾರವಾಡ ವಕೀಲರ ಸಂಘದ ಅಧ್ಯಕ್ಷ ಅಶೋಕ ವ್ಹಿ.ಏಣಗಿ, ಸರ್ಕಾರಿ ಅಭಿಯೋಜಕಿ ಶೈಲಾ ಅಂಗಡಿ ಭಾಗವಹಿಸಿದ್ದರು.

ನಗರದ ನ್ಯಾಯಾಧೀಶರು, ವಕೀಲರ ಸಂಘದ ಸದಸ್ಯರು, ಜಿಲ್ಲಾ ನ್ಯಾಯಾಲಯದ ಸಿಬ್ಬಂದಿ, ಅಭಿಯೋಜನೆ ಇಲಾಖೆಯ ಸಿಬ್ಬಂದಿ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸಿಬ್ಬಂದಿಗಳು ಭಾಗವಹಿಸಿದ್ದರು.

## ನಿಧನ

### ಡಾ. ಶಿದ್ರಾಮಯ್ಯಸ್ವಾಮಿ ಹೊಸಳ್ಳಿಮಠ



**ಲಕ್ಷ್ಮೇಶ್ವರ:** ಶಿರಹಟ್ಟಿ ತಾಲೂಕಿನ ಬೂದಿಹಾಳ ಗ್ರಾಮದ ಹಿರಿಯ ವೈದ್ಯರಾದ ಡಾ. ಶಿದ್ರಾಮಯ್ಯಸ್ವಾಮಿ ಎಂ.ಹೊಸಳ್ಳಿಮಠ (85) ಗುರುವಾರ ನಿಧನರಾದರು. ಮೃತರು ಪುತ್ರ, ಇಬ್ಬರು ಪುತ್ರಿಯರು ಸೇರಿ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

## ನಿಧನ

### ವೀರಪ್ಪ ಕಳಕೊಣ್ಣವರ



**ನರೇಗಲ್ಲ:** ಪಟ್ಟಣದ ಗುಡಿ ಓಣಿ ನಿವಾಸಿ, ಕುಡುವಕ್ಕಲಿಗ ಸಮಾಜದ ಹಿರಿಯರಾದ ವೀರಪ್ಪ ದೊಡ್ಡಬಸಪ್ಪ ಕಳಕೊಣ್ಣವರ (86) ಗುರುವಾರ ನಿಧನ ಹೊಂದಿದರು. ಅವರಿಗೆ ಇಬ್ಬರು ಪುತ್ರರು, ನಾಲ್ವರು ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವಿದೆ.

# ಜ್ಞಾನವೃದ್ಧಿಗೆ ವಿಜ್ಞಾನ ಪ್ರದರ್ಶನ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ ಬೆಳೆಸಲು ಹಾಗೂ ಜ್ಞಾನ ವೃದ್ಧಿಸಲು ವಿಜ್ಞಾನ ಪ್ರದರ್ಶನ ಸಹಕಾರಿಯಾಗಿದೆ ಎಂದು ಬ್ರೈಟ್ ಹಾರಿಝೋನ್ ಪ್ರೌಢಶಾಲೆಯ ಅಧ್ಯಕ್ಷ ಬಿ.ಡಿ. ಹರ್ತಿ ಹೇಳಿದರು.

ಅವರು ಬ್ರೈಟ್ ಹಾರಿಝೋನ ಪ್ರೌಢಶಾಲೆಯಲ್ಲಿ ಜರುಗಿದ ತಾಲೂಕು ಮಟ್ಟದ ವಿಜ್ಞಾನ ವಿಚಾರ ಗೋಷ್ಠಿ, ವಿಜ್ಞಾನ ನಾಟಕ ಸ್ಪರ್ಧೆ ಹಾಗೂ ವಿಜ್ಞಾನ ವಸ್ತುಪ್ರದರ್ಶನದಲ್ಲಿ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರ ವಿತರಿಸಿ ಮಾತನಾಡಿದರು.

ಇಂದು ಆಧುನಿಕ ತಂತ್ರಜ್ಞಾನ ಅತೀ ವೇಗವಾಗಿ ಬೆಳೆಯುತ್ತಿದ್ದು, ವಿದ್ಯಾರ್ಥಿಗಳು ವಿಜ್ಞಾನ-ತಂತ್ರಜ್ಞಾನದಲ್ಲಿ ಸಾಕಷ್ಟು ಕೌಶಲ್ಯ ಹೊಂದಿದ್ದಾರೆ. ಅಂತಹ ಮಕ್ಕಳನ್ನು ಗುರುತಿಸಿ ಪ್ರೋತ್ಸಾಹಿಸುವುದು ಪ್ರತಿಯೊಬ್ಬ ಶಿಕ್ಷಕರ ಜವಾಬ್ದಾರಿಯಾಗಿದ್ದು, ಕಠಿಣ ಶ್ರಮದಿಂದ ಸಾಧನೆ ಸಾಧ್ಯವಾಗುತ್ತದೆ ಎಂದರು.

ಇಂಜಿನಿಯರ್ ವಿಭಾಗದಲ್ಲಿ ಶ್ರೇಯಸ್ ಮಲ್ಲೂರ, ಶಶಾಂಕ ಜನ್ನದಾಸರ ಪ್ರಥಮ ಸ್ಥಾನ ಪಡೆದು ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದರೆ, ಬಾಹ್ಯಾಕಾಶ ವಿಭಾಗದಲ್ಲಿ ಹಪ್ಸಾ ಯರಗುಡಿ ದ್ವಿತೀಯ ಸ್ಥಾನ ಪಡೆದಿದ್ದಾರೆ.

ಕಾರ್ಯಕ್ರಮದಲ್ಲಿ ಬಿಇಓ ವಿ.ವಿ. ನಡುವಿನಮನಿ, ಶಂಕರ ಹಡಗಲಿ, ಜೆ.ಎ. ಭಾವಿಕಟ್ಟಿ, ರವಿ ಡಂಬಳ, ಎಂ.ಎನ್. ದೇಸಾಯಿ, ಎಸ್.ಎನ್. ಗದಗ, ಎಸ್.ಎಫ್. ಬೆಳದಡಿ ಇದ್ದರು.



ಬೆಣಚಮಟ್ಟಿ ಗ್ರಾಮದಲ್ಲಿ ನಡೆದ ನರೇಗಾ ಗ್ರಾಮಸಭೆಯಲ್ಲಿ ತಾ.ಪಂ ಇಒ ಚಂದ್ರಶೇಖರ ಕಂದಕೂರು

# ಕ್ರಿಯಾಯೋಜನೆಯಲ್ಲಿ ಕಾಮಗಾರಿಗಳನ್ನು ಅಳವಡಿಸಿಕೊಳ್ಳಿ




■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ನರೇಗಾ ಯೋಜನೆಯಲ್ಲಿ ವೈಯಕ್ತಿಕ ಹಾಗೂ ಸಮುದಾಯ ಕಾಮಗಾರಿಗಳ ಜೊತೆಗೆ ಶಾಲೆಗೆ ಸಂಬಂಧಿಸಿದ ಕಾಮಗಾರಿಗಳನ್ನು ಕಡ್ಡಾಯವಾಗಿ ಕ್ರಿಂಯಾಂಯೋಜನೆಂಯುಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರ ಹೇಳಿದರು.

ತಾಲೂಕಿನ ಕುಂಟೋಜಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಣಚಮಟ್ಟಿ ಗ್ರಾಮದಲ್ಲಿ 2026-27ನೇ ಸಾಲಿನ ನರೇಗಾ ಕ್ರಿಯಾ ಯೋಜನೆ ತಯಾರಿಸುವ ಕುರಿತು ಗುರುವಾರ ನಡೆದ ಗ್ರಾಮ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜಾಬ್ ಕಾರ್ಡ್ ಹೊಂದಿರುವ ಕೂಲಿಕಾರರು ತಮ್ಮ ಜೀವಿತಾವಧಿಯಲ್ಲಿ 5 ಲಕ್ಷ ರೂಪಾಯಿವರೆಗೂ ವೈಯಕ್ತಿಕ ಸೌಲಭ್ಯಗಳನ್ನು ಪಡೆಯಬಹುದು. ಅದರಲ್ಲಿ ಕೃಷಿ ಹೊಂಡ, ಎರೆಹುಳು ಘಟಕ, ಕೊಳವೆ ಬಾವಿ ಮರುಪೂರಣ ಘಟಕ, ಮೇಕೆ ಶೆಡ್, ದನದ ದೊಡ್ಡಿ, ತೋಟಗಾರಿಕೆ ಇಲಾಖೆಯಲ್ಲಿ ಪಪ್ಪಾಯಿ ಮತ್ತು ಬಾಳೆ ಹೊರತುಪಡಿಸಿ ಉಳಿದಂತೆ ಮಾವು, ಕರಿಬೇವು, ಸೀಬೆ, ನುಗ್ಗೆ, ತೆಂಗು, ಸೀತಾಫಲ ಸೇರಿದಂತೆ ದೀರ್ಘಕಾಲಿಕ ಬೆಳೆಗಳನ್ನು ನರೇಗಾದಲ್ಲಿ ಮಾಡಿಕೊಳ್ಳಲು ಅವಕಾಶವಿದೆ. ಇಂತಹ ಕಾಮಗಾರಿಗಳನ್ನು ಕ್ರಿಯಾ ಯೋಜನೆಯಲ್ಲಿ ಸೇರಿಸಿಕೊಳ್ಳಬಹುದು.

ಆಸಕ್ತ ರೈತರು ಕ್ರಿಯಾ ಯೋಜನೆಯಲ್ಲಿ ಹೆಸರನ್ನು ಅಳವಡಿಸಿಕೊಂಡು ನಂತರ ಕೆಲಸ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

### ಶಾಲೆ ಅಭಿವೃದ್ಧಿಗೆ ಮೊದಲ ಆದ್ಯತೆ

ನರೇಗಾ ಯೋಜನೆಯಡಿ ಶಾಲೆಗೆ ಬೇಕಾಗುವಂತ ಶೌಚಾಲಯ, ಅಡುಗೆ ಕೋಣೆ, ಕಂಪೌಂಡ್, ಆಟದ ಮೈದಾನಕ್ಕೆ ಮೊದಲ ಆದ್ಯತೆ ನೀಡಲಾಗಿದೆ. ಪ್ರತಿ ಶಾಲೆಗಳಲ್ಲಿ ಶೌಚಾಲಯ, ಅಡುಗೆ ಕೋಣೆ, ಕಂಪೌಂಡ್, ಆಟದ ಮೈದಾನ ಪರಿಶೀಲಿಸಿ, ಯಾವ ಶಾಲೆಗೆ ಯಾವುದು ಅವಶ್ಯಕವಾಗಿದೆ ಅವುಗಳನ್ನು ಕಡ್ಡಾಯವಾಗಿ ಹೆಸರನ್ನು ಸೇರಿಸಿ ಕ್ರಿಯಾ ಯೋಜನೆಯಲ್ಲಿ ತಯಾರಿಸಬೇಕು ಎಂದು ತಿಳಿಸಿದರು.

ಸ´ವ´ುುದಾ೦ು´ು ಕಾಮಗಾರಿಗಳಾದ ಸಿಸಿ ರಸ್ತೆ, ಚರಂಡಿ, ಕೆರೆ ಅಭಿವೃದ್ಧಿ, ಸ್ಮಶಾನ ಅಭಿವೃದ್ಧಿ, ಮಳೆ ನೀರು ಕೊಯ್ಲು, ಎನ್.ಆರ್.ಎಲ್.ಎಂ. ಶೆಡ್ ನಿರ್ಮಾಣ ಸೇರಿದಂತೆ ಇತರೆ ಕಾಮಗಾರಿಗಳನ್ನು ಮಾಡಿಕೊಳ್ಳಲು ನರೇಗಾದಲ್ಲಿ ಅವಕಾಶವಿದ್ದು, ಯಾವ ಗ್ರಾಮಕ್ಕೆ ಯಾವ ಕಾಮಗಾರಿಗಳು ಅವಶ್ಯಕವಾಗಿವೆ ಅಂತಹವುಗಳನ್ನು ಆದ್ಯತೆಯ ಮೇರೆಗೆ ಕ್ರಿಯಾಯೋಜನೆಯಲ್ಲಿ ಅಳವಡಿಸಲು ಸೂಚಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪೂನಾಬಾಯಿ ರಾಠೋಡ, ಸದಸ್ಯರಾದ ಲಿಂಬಣ್ಣ ಗಡಾದ, ದೊಡ್ಡಮ್ಮ ಅಗಸಿಮನಿ, ಲಕ್ಷ್ಮವ್ವ ಕೌಡಕಿ, ಶೇಖಪ್ಪ ಪೂಜಾರ, ದುರಗಪ್ಪ ಕೊತಬಾಳ, ಪರಪ್ಪ ತೊಂಡಿಹಾಳ, ಸಂಗಪ್ಪ ಪೂಜಾರ, ರೇಷ್ಮೆ ಇಲಾಖೆಯ ಸುರೇಶ ಡಾಣಕ, ತೋಟಗಾರಿಕೆ ಇಲಾಖೆಯ ಮಹಾಂತೇಶ ಅಂಟಿನ್ ಸೇರಿದಂತೆ ಇತರೆ ಇಲಾಖೆಗಳ ಅಧಿಕಾರಿಗಳು, ನರೇಗಾ ಹಾಗೂ ಪಂಚಾಯಿತಿ ಸಿಬ್ಬಂದಿಗಳು, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮಸ್ಥರು ಹಾಜರಿದ್ದರು.

ಪಂಚಾಯತ ಅಭಿವೃದ್ಧಿ ಅಧಿಕಾರಿ ಮಂಜುನಾಥ ಮೇಟಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಪೊರಕೆ ಚಳುವಳಿ ಮಾಡುವ ಮೂಲಕ ಸರ್ಕಾರದ ಗಮನ ಸೆಳೆದ ರೈತರು

# ರಾಜಕಾರಣಿಗಳು ಗದ್ದುಗೆ ಗುದ್ದಾಟದಿಂದ ಹೊರಬನ್ನಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೆಕ್ಕೆಜೋಳದ ಬೆಂಬಲ ಬೆಲೆ ಖರೀದಿ ಕೇಂದ್ರಕ್ಕಾಗಿ ಸಮಗ್ರ ರೈತ ಸಂಘಟನೆಗಳ ಒಕ್ಕೂಟದಿಂದ ಪಕ್ಷಾತೀತವಾಗಿ ನಡೆಸುತ್ತಿರುವ ಅಹೋರಾತ್ರಿ ಧರಣಿ ಸತ್ಯಾಗ್ರಹದಲ್ಲಿ ಗುರುವಾರ ನೂರಾರು ರೈತರು ಪೊರಕೆ ಚಳುವಳಿ ಮಾಡುವ ಮೂಲಕ ಸರ್ಕಾರದ ಗಮನ ಸೆಳೆಯುವ ಪ್ರತಿಭಟನೆ ನಡೆಸಿದರು.

ಕೈಗಾ-ಇಳಕಲ್ ರಾಜ್ಯ ಹೆದ್ದಾರಿಯಲ್ಲಿ ಪೊರಕೆ ಹಿಡಿದು ಕಸ ಗುಡಿಸುವ ಮೂಲಕ, ರೈತರು ಮನಸ್ಸು ಮಾಡಿದರೆ ಈ ಪೊರಕೆ ಕಸವನ್ನು ಸ್ವಚ್ಛ ಮಾಡಿದಂತೆ ಸರಕಾರವನ್ನೇ ಗುಡಿಸಿ ಗುಂಡಾಂತರ ಮಾಡುವ ತಾಕತ್ತು ರೈತರಿಗಿದೆ ಎಂದು ಎಚ್ಚರಿಸಿದರು.

ಹೋರಾಟದ ಪರಿಣಾಮ ಸರಕಾರ ಗೋವಿನಜೋಳ ಖರೀದಿ ಕೇಂದ್ರ ಪ್ರಾರಂಭಿಸುವ ಕುರಿತು ನ. 21ರಂದು ನಿರ್ಧರಿಸಿ 2-3 ದಿನಗಳಲ್ಲಿ ಖರೀದಿ ಕೇಂದ್ರ ಪ್ರಾರಂಭಿಸುವ ಭರವಸೆಯನ್ನು ರೈತರಿಗೆ ನೀಡಿತ್ತು. ಆದರೆ ಇಲ್ಲಿಯವರೆಗೂ ಖರೀದಿ ಕೇಂದ್ರ ಪ್ರಾರಂಭಿಸುವ ನಿಟ್ಟಿನಲ್ಲಿ ಯಾವುದೇ ಕ್ರಮವಾಗದಿರುವದು ರೈತರನ್ನು ಕೆರಳಿಸಿದ್ದು, ರೈತರು ವಿನೂತನ ರೀತಿಯಲ್ಲಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ್ರ ಗೋವಿಂದಗೌಡ್ರ ಮಾತನಾಡಿ, ಈ ಬಾರಿ ಹೆಚ್ಚಿನ ಮಳೆಯಾಗಿ ರೈತರ ಬಹುತೇಕ ಬೆಳೆಗಳು ಹಾಳಾಗಿವೆ. ಮೆಕ್ಕೆಜೋಳದ ಖರೀದಿ ಕೇಂದ್ರ ಪ್ರಾರಂಭಿಸಲು ಸರಕಾರಕ್ಕೆ ಇರುವ ತೊಂದರೆಯಾದರೂ ಏನು? ಸರ್ಕಾರ ಆರ್ಥಿಕವಾಗಿ ದಿವಾಳಿಯಾಗಿದ್ದರೆ ಅದನ್ನಾದರೂ ಹೇಳಲಿ. ಆಶ್ವಾಸನೆ ನೀಡಿ ರೈತರನ್ನು ಹತಾಶರನ್ನಾಗಬೇಡಿ. ತಿಂಗಳಿಂದ ಹಗಲೂ-ರಾತ್ರಿ ಹೊಲದಲ್ಲಿಯೇ ಇದ್ದು, ಮೆಕ್ಕೆಜೋಳದ ರಾಶಿಯನ್ನು ಆಶಾಭಾವನೆಯಿಂದ ಕಾಯುತ್ತಿದ್ದಾರೆ. ಮಹಸೀಲು ಹಾಳಾಗುವ ಮುನ್ನವೇ ಮುಖ್ಯಮಂತ್ರಿಗಳು ಗದ್ದುಗೆ ಗುದ್ದಾಟದಿಂದ ಹೊರಬಂದು ರೈತರ ಕಡೆ ಗಮನ ಹರಿಸಬೇಕು ಎಂದು ಸರಕಾರವನ್ನು ಆಗ್ರಹಿಸಿದರು.

ಆದ್ರಳ್ಳಿಯ ಗವಿಮಠದ ಡಾ. ಕುಮಾರ ಮಹಾರಾಜರು ಮಾತನಾಡಿ, ಖರೀದಿ ಕೇಂದ್ರ ಪ್ರಾರಂಭಿಸುವದಾಗಿ ಸರಕಾರ ಭರವಸೆ ನೀಡಿ ಒಂದು ವಾರವಾಗಿದೆ. ಶನಿವಾರ ಬೆಳಿಗ್ಗೆ 10 ಗಂಟೆಯೊಳಗೆ ಖರೀದಿ ಕೇಂದ್ರ ಆರಂಭವಾಗದಿದ್ದಲ್ಲಿ ಮತ್ತೆ ಆಮರಣಾಂತ ಉಪವಾಸ ಪ್ರಾರಂಭಿಸುತ್ತೇವೆ. ಯಾವುದೇ ವೈದ್ಯಕೀಯ ತಪಾಸಣೆ/ಚಿಕಿತ್ಸೆ ಪಡೆಯುವುದಿಲ್ಲ. ರೈತರ ಬೇಡಿಕೆ ಈಡೇರದಿದ್ದಲ್ಲಿ ವೇದಿಕೆಯಲ್ಲಿಯೇ ಪ್ರಾಣ ಬಿಡಲು ಸಿದ್ಧ ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಬಸವರಾಜ ಬೆಂಡಿಗೇರಿ, ಪೂರ್ಣಾಜಿ ಖರಾಟೆ, ರವಿಕಾಂತ ಅಂಗಡಿ, ಮಂಜುನಾಥ ಮಾಗಡಿ, ಮಹೇಶ ಹೊಗೆಸೊಪ್ಪಿನ, ನಾಗರಾಜ ಚಿಂಚಲಿ, ನೀಲಪ್ಪ ಶರಸೂರಿ ಮುಂತಾದವರಿದ್ದರು.

# ಹಕ್ಕೊತ್ತಾಯ ಇಂದು

■ವಿಜಯಸಾಕ್ಷಿ ಸುದ್ದಿ, ರೋಣ

ಶಾಸಕ ಜಿ.ಎಸ್. ಪಾಟೀಲರಿಗೆ ಈ ಬಾರಿ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿ ನ. 28ರಂದು ಹಕ್ಕೊತ್ತಾಯ ಮಂಡಿಸಲಾಗುತ್ತಿದ್ದು, ಹಕ್ಕೊತ್ತಾಯ ಮಂಡಿಸುವ ಸಂದರ್ಭದಲ್ಲಿ ಯುವ ಕಾಂಗ್ರೆಸ್ಸಿನ ಅಂದಾಜು 3 ಸಾವಿರ ಕಾರ್ಯಕರ್ತರು ಹಾಗೂ ಹಿರಿಯ ಮುಖಂಡರು ಭಾಗಿಯಾಗಲಿದ್ದಾರೆ.

ಬೆಳಿಗ್ಗೆ 10ಕ್ಕೆ ಪಟ್ಟಣದ ಸಿದ್ದಾರೂಢ ಮಠದಿಂದ ಕಾರ್ಯಕರ್ತರ ಮೆರವಣಿಗೆ ಆರಂಭವಾಗಿ ಮುಲ್ಲಾನ ಭಾವಿ ಬಳಿ ಮುಕ್ತಾಯವಾಗಲಿದೆ ಎಂದು ಮತಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷ ಮುತ್ತು ನವಲಗುಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಕ್ಸ್‌ಪ್ರೆಸ್ ರೈಲಿನಲ್ಲಿ ನೂಡಲ್ಸ್ ಬೇಯಿಸಿದ ಮಹಿಳೆ ಪುಣೆಯಲ್ಲಿ ಪತ್ತೆ; ಕ್ಷಮೆಯಾಚನೆ

■ವಿಜಯಸಾಕ್ಷಿ ಸುದ್ದಿ, ಮುಂಬೈ

ಎಕ್ಸ್‌ಪ್ರೆಸ್ ರೈಲಿನ ಕೋಚ್‌ನ ಪವರ್ ಸಾಕೆಟ್‌ಗೆ ಪ್ಲಗ್ ಮಾಡಲಾದ ಎಲೆಕ್ಟ್ರಿಕ್ ಕೆಟಲ್‌ನಿಂದ ಬಳಸಿ ನೂಡಲ್ಸ್ ತಯಾರಿಸುವ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿತ್ತು; ಆ ಮಹಿಳೆಯನ್ನು ಕೇಂದ್ರ ರೈಲ್ವೆ ಪತ್ತೆಹಚ್ಚಿದೆ.

ಸರಿತಾ ಲಿಂಗಾಯತ್ ಎಂದು ಗುರುತಿಸಲಾದ ಮಹಿಳೆ ಪುಣೆಯ ಚಿಂಚ್‌ವಾಡ್ ನಿವಾಸಿಯಾಗಿದ್ದು, ಪ್ರಯಾಣಿಕರ ಸುರಕ್ಷತೆಗೆ ಅಪಾಯವನ್ನುಂಟುಮಾಡಿದ್ದಕ್ಕಾಗಿ ರೈಲ್ವೆ ಕಾಯ್ದೆಯ ಸೆಕ್ಷನ್ 154 ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಇದಲ್ಲದೆ, ಸರಿತಾ ತನ್ನ ಅಧಿಕೃತ ಇನ್‌ಸ್ಟಾಗ್ರಾಮ್ ಹ್ಯಾಂಡಲ್‌ನಲ್ಲಿ ಕ್ಷಮೆಯಾಚಿಸುವ ವೀಡಿಯೊಗಳನ್ನು ಸಹ ಪೋಸ್ಟ್ ಮಾಡಿದ್ದಾರೆ.

ಮುಂಬೈನ ಆರ್‌ಪಿಎಫ್ ಅಧಿಕಾರಿಗಳ ಜೊತೆಗಿನ ಚಿತ್ರವನ್ನು ಪೋಸ್ಟ್ ಮಾಡಿದ ಅವರು, ಹರಿದ್ವಾರದಿಂದ ಪುಣೆಗೆ ಪ್ರಯಾಣಿಸುತ್ತಿದ್ದ ರೈಲಿನಲ್ಲಿ ಈ ಘಟನೆ ಸಂಭವಿಸಿದೆ ಎಂದು ವಿವರಿಸಿದರು. ರೈಲಿನಲ್ಲಿ ಕೆಲವು ಮಕ್ಕಳು ಮ್ಯಾಗಿಯನ್ನು ಕೆಟಲ್‌ನಲ್ಲಿ ತಯಾರಿಸಬಹುದೇ ಎಂದು ಕೇಳಿದ ಕಾರಣ ತಾನು ನೂಡಲ್ಸ್ ತಯಾರಿಸಲು ಕೆಟಲ್ ಅನ್ನು ಬಳಸಿದ್ದೇನೆ ಎಂದು ಹೇಳಿದರು.

ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)

**ಕಾರ್ಯನಿರ್ವಾಹಕ ಇಂಜಿನೀಯರ,**

**ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2025-26/2713

ದಿನಾಂಕ : 26-11-2025

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**

**Standard Bid Document KW-1, 2**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1,2 ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 7 ಕಾಮಗಾರಿಗಳ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ : 2025-26 ನೇ ಸಾಲಿನ ಜಿಲ್ಲಾ ಪಂಜಾಯತ್ (2435-00-101-0-33) ಕೃಷಿ ಕಛೇರಿ ಕಟ್ಟಡಗಳ ನಿರ್ವಹಣೆ ವಾರ್ಷಿಕ ಕ್ರೀಯಾ ಯೋಜನೆ, 2024-25 ನೇ ಸಾಲಿನ ರಾಷ್ಟ್ರೀಯ ಗ್ರಾಮ ಸ್ವರಾಜ ಅಭಿಯಾನ ಯೋಜನೆ, 2025-26 ನೇ ಸಾಲಿನ ಜಿಲ್ಲಾ ಪಂಜಾಯತ್ (2435-00-101-0-32-140) ತೋಟಗಾರಿಕೆ ಕಟ್ಟಡಗಳ ಕ್ರೀಯಾ ಯೋಜನೆ, 2024-25 ನೇ ಸಾಲಿನ ಪ್ರಗತಿ ಕಾಲೋನಿ ಅನುದಾನ ಯೋಜನೆ, 2025-26 ನೇ ಸಾಲಿನ ಜಿಲ್ಲಾ ಪಂಜಾಯತ್ ಆರೋಗ್ಯ ಕಟ್ಟಡಗಳ ನಿರ್ವಹಣೆ (2210-00-101-36) ಕ್ರೀಯಾ ಯೋಜನೆಯಡಿ, ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲ್ಯು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

WORK_INDENT : 20815, 20466, 20537, 20793, 20962, 20994, 19158

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **4.65** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **21.14** ಲಕ್ಷಗಳು ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ:- ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **27-11-2025** ರಿಂದ **12-12-2025** ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ : **15-12-2025** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,**
**ಪಂ.ರಾಜ್. ಇಂಜಿನೀಯರಿಂಗ್ ವಿಭಾಗ, ಗದಗ**

ವಾಸಾಸಂಇ/ಗದಗ/ಕೆಎಸ್ಎಂಸಿಎ/408/2025-26

ಕರ್ನಾಟಕ ಸರಕಾರ

**ಜಿಲ್ಲಾ ಪಂಚಾಯತ, ಗದಗ** **ತಾಲೂಕ ಪಂಚಾಯತ ಮುಂಡರಗಿ**

## ಗ್ರಾಮ ಪಂಚಾಯತ ಕಾರ್ಯಾಲಯ, ಕಲಕೇರಿ

**ತಾಲೂಕ :- ಮುಂಡರಗಿ** **ಜಿಲ್ಲಾ:-ಗದಗ**

kalakeri.mun.gdg@gmail.com

ಗ್ರಾ. ಪಂ.ಕ/ ಮ.ಗಾಂ.ರಾ.ಗ್ರಾ.ಉ.ಖಾ. ಯೋಜನೆ/ದರಪಟ್ಟಿ/2025-26 ದಿನಾಂಕ: 27/11/2025

**-ಃ ದರಪಟ್ಟಿ ಪ್ರಕಟಣೆ ಃ-**

ಅಧ್ಯಕ್ಷರು/ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಲಕೇರಿ ಇವರ 2025-26ನೇ ಸಾಲಿನ ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ. ಗಳಲ್ಲಿ) |
|---|---|---|---|
| 1 | ಚೆನ್ನಪ್ಪ ಹನುಮಂತಪ್ಪ ಪೂಜಾರಿ ಇವರ ಮನೆಯಿಂದ ಜಾಪಣ್ಣ ಮುದ್ಲಾಪುರ್ ಇವರ ಹೊಲದ ವರೆಗೆ ಫಟಾರ್ ನಿರ್ಮಾಣ | 3.09 | 500.00 |
| 2 | ಕಲಕೇರಿ ಗ್ರಾಮದ ಮೈಬು ಸಾಬ್ ಸೈ ಮಕಂದರ್ ಇವರ ಮನೆಯಿಂದ ಈರಣ್ಣ ಎಲಿಗಾರ ಇವರ ಮನೆಯವರೆಗೆ ಸಿಸಿ ರಸ್ತೆ ನಿರ್ಮಾಣ | 1.60 | 500.00 |
| 3 | ಕಲಕೇರಿ ಗ್ರಾಮದ ಬೆಳ್ಳಟ್ಟಿ ರಸ್ತೆಯಿಂದ ಗುಡ್ಡದ ರಸ್ತೆಗಳಿಗೆ ಸಿಸಿ ರಸ್ತೆ ನಿರ್ಮಾಣ | 1.60 | 500.00 |
| 4 | ಕಲಕೇರಿ ಗ್ರಾಮದ ಫಕೀರ್ ಸಾಬ್ ವಡ್ಡಟ್ಟಿ ಇವರ ಮನೆಯಿಂದ ಸುವರ್ಣ ಬಡಿಗೇರ್ ಇವರ ಮನೆಯವರಿಗೆ ಸಿಸಿ ರಸ್ತೆ ನಿರ್ಮಾಣ | 1.60 | 500.00 |
| 5 | ಮುಷ್ಟಿಕೊಪ್ಪ ಗ್ರಾಮದಲ್ಲಿ ಗಿರಿಯಪ್ಪ ತಳವಾರ ಮನೆಯಿಂದ ನಿಂಗಪ್ಪ ಬಡಾಲಿ ಮನೆಯವರಿಗೆ ಸಿಸಿ ರಸ್ತೆ ನಿರ್ಮಾಣ | 1.60 | 500.00 |
| 6 | ಕಲಕೇರಿ ಗ್ರಾಮದ ಜಾಮಿಯಾ ಮಸೀದಿಯಿಂದ ಬೆಳ್ಳಟ್ಟಿ ರಸ್ತೆವರೆಗೆ ಸಿ ಸಿ ರಸ್ತೆ ನಿರ್ಮಾಣ | 1.60 | 500.00 |
| 7 | ಕಲಕೇರಿ ಗ್ರಾಮದ ಪಿಎಂ ಪಾಟೀಲ ಅವರ ಮನೆಯಿಂದ ಭಜಂತ್ರಿ ಅವರ ಮನೆಯವರಿಗೆ ಸಿಸಿ ರಸ್ತೆ ನಿರ್ಮಾಣ | 1.60 | 500.00 |
| 8 | ಕಲಕೇರಿ ಗ್ರಾಮದ ಮೈಬು ಸಾಬ್ ಮಕಾನದಾರ್ ಮನೆಯಿಂದ ಸುರೇಶ್ ಹುಳಕಣ್ಣವರ ಮನೆಯವರಿಗೆ ಸಿ ಸಿ ರಸ್ತೆ ನಿರ್ಮಾಣ | 1.60 | 500.00 |
| 9 | ಕಲಕೇರಿ ಗ್ರಾಮದ ಶರಣಪ್ಪ ಮೇಟಿ ಅವರ ಮನೆಯಿಂದ ದೇವಪ್ಪ ಹುಳಕಣ್ಣವರ ಇವರ ಮನೆಯ ವರೆಗೆ ಸಿ ಸಿ ಫಟಾರ ನಿರ್ಮಾಣ | 1.60 | 500.00 |
| 10 | ದೇವಪ್ಪ ಹುಳಕಣ್ಣವರ ಮನೆಯಿಂದ ನಿಂಗಪ್ಪ ಉಪ್ಪಾರ್ ಮನೆಯವರಿಗೆ ಸಿಸಿ ಚರಂಡಿ ನಿರ್ಮಾಣ | 1.60 | 500.00 |
| 11 | ನಿಂಗಪ್ಪ ಉಪ್ಪಾರ್ ಮನೆಯಿಂದ ಬ್ಯಾಂಕಿನ ವರೆಗೆ ಸಿಸಿ ಚರಂಡಿ ನಿರ್ಮಾಣ | 1.60 | 500.00 |
| 12 | ವಿರುಪಾಪುರ ಗ್ರಾಮದ ಮುಂಡರಗಿ ಶಿರಹಟ್ಟಿ ಮುಖ್ಯ ರಸ್ತೆಯಿಂದ ಹಾಲಯ್ಯ್ ಅವರ ಹಿತ್ತಲದವರೆಗೆ ಸಿ ಸಿ ಚರಂಡಿ ನಿರ್ಮಾಣ | 1.60 | 500.00 |
| 13 | ಕಲಕೇರಿ ಗ್ರಾಮದ ಸ್ಮಶಾನಕ್ಕೆ ಹೋಗುವ ರಸ್ತೆಗೆ ಸಿಡಿ ನಿರ್ಮಾಣ | 2.25 | 500.00 |

1) ದರಪಟ್ಟಿ ಅವಧಿ 28-11-2025 ರಿಂದ 05-12-2025 ರವರೆಗೆ
2) ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ 05-12-2025 ಮಧ್ಯಾಹ್ನ 12.30 ಘಂಟೆಯವರೆಗೆ.
3) ದರಪಟ್ಟಿ ತೆರೆಯುವ ದಿನಾಂಕ 05-12-2025 ಮಧ್ಯಾಹ್ನ 12.30 ಘಂಟೆ ನಂತರ.
4) ಅರ್ಜಿ ಸಲ್ಲಿಸುವ ಆಸಕ್ತ ನೋಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು.
5) ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಯನ್ನು ಸಲ್ಲಿಸಬಹುದು.
6) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳು ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಾರ್ಯಲಯ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/-
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತಿ ಕಲಕೇರಿ

ಸಹಿ ಆಗಿದೆ/-
**ಅಧ್ಯಕ್ಷರು**
ಗ್ರಾಮ ಪಂಚಾಯತಿ ಕಲಕೇರಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka